ಸಂಪುಟ : 11 ಸಂಚಿಕೆ : 141 ಪುಟ : 4+2 ಬೆಲೆ : 3.00 ಮಂಗಳವಾರ ಜುಲೈ 7, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 141 Pages : 4+2 Rate : 3.00 Tuesday July 7, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

## ಭಕ್ತಿಸಾಗರದಲ್ಲಿ ತೇಲಿದ ಉಭಯ ಗುರುಗಳ ಮಹಾರಥೋತ್ಸವ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಲಿಂ. ಪಂಡಿತ ಪಂಚಾಕ್ಷರಿ ಗವಾಯಿಗಳವರ ಹಾಗೂ ಲಿಂ. ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳವರ ಮಹಾರಥೋತ್ಸವವು ಭಾನುವಾರ ಸಂಜೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ಭಕ್ತಿಭಾವದಿಂದ ಅದ್ದೂರಿಯಾಗಿ ನೆರವೇರಿತು.

ನಾಡಿನ ಹರ-ಗುರು-ಚರಮೂರ್ತಿಗಳ ಸಾನ್ನಿಧ್ಯದಲ್ಲಿ ಭಕ್ತರು ಉಭಯ ಗುರುಗಳ ನಾಮಸ್ಮರಣೆ ಮೊಳಗಿಸುತ್ತಾ ಮಹಾರಥವನ್ನು ಎಳೆಯುವ ಮೂಲಕ ಭಕ್ತಿ ಸಮರ್ಪಿಸಿದರು. ರಥೋತ್ಸವದ ವೇಳೆ ಪುಣ್ಯಾಶ್ರಮದ ಆವರಣ ಭಕ್ತರ ಜಯಘೋಷಗಳಿಂದ ಮೊಳಗಿತು.

ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ಭಕ್ತರು ರಥದ ಕಳಸಕ್ಕೆ ಉತ್ತತ್ತಿ ಹಾಗೂ ಲಿಂಬೆಹಣ್ಣು ಎಸೆದು, ನಾಡಿಗೆ ಉತ್ತಮ ಮಳೆ, ಸಮೃದ್ಧ ಬೆಳೆ ಹಾಗೂ ಲೋಕ ಕಲ್ಯಾಣವಾಗಲಿ ಎಂದು ಪ್ರಾರ್ಥಿಸಿದರು.

ಮಹಿಳೆಯರು, ಮಕ್ಕಳು ಸೇರಿದಂತೆ ಸಾವಿರಾರು ಭಕ್ತರು ಮಹಾರಥೋತ್ಸವದ ಅಪರೂಪದ ಕ್ಷಣಗಳನ್ನು ಕಣ್ತುಂಬಿಕೊಂಡು ಉಭಯ ಗುರುಗಳಿಗೆ ಭಕ್ತಿಪೂರ್ವಕ ನಮನ ಸಲ್ಲಿಸಿದರು.

## ನೀಲಕಂಠ ಶಾಸ್ತ್ರಿಗಳಿಗೆ 'ಪದ್ಮಭೂಷಣ ಪಂ. ಪುಟ್ಟರಾಜ' ಪ್ರಶಸ್ತಿ



**ವಿಜಯಸಾಕ್ಷಿ ಸುದ್ದಿ, ಗದಗ**


ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಲಿಂ. ಪಂಡಿತ ಪಂಚಾಕ್ಷರಿ ಗವಾಯಿಗಳ 82ನೇ ಹಾಗೂ ಲಿಂ. ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳ 16ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ 2026ನೇ ಸಾಲಿನ 'ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿ'ಯನ್ನು ಕೀರ್ತನ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ನೀಲಕಂಠ ಶಾಸ್ತ್ರಿಗಳು (ಕೂಸಗೂರು) ಅವರಿಗೆ ಪ್ರದಾನ ಮಾಡಿ ಗೌರವಿಸಲಾಯಿತು.

ಸಂಗೀತ, ಭಕ್ತಿ ಮತ್ತು ಕೀರ್ತನ ಪರಂಪರೆಯನ್ನು ಜನಮಾನಸಕ್ಕೆ ತಲುಪಿಸುವಲ್ಲಿ ಸಲ್ಲಿಸಿರುವ ಅಮೂಲ್ಯ ಸೇವೆಯನ್ನು ಪರಿಗಣಿಸಿ ಅವರಿಗೆ ಈ ಪ್ರತಿಷ್ಠಿತ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದುಗಿನ ತೋಂಟದಾರ್ಯ ಡಾ. ಸಿದ್ಧರಾಮ ಮಹಾಸ್ವಾಮಿಗಳು ಸೇರಿದಂತೆ ವಿವಿಧ ಮಠಗಳ ಪೂಜ್ಯರು, ಗಣ್ಯರು, ಕಲಾವಿದರು ಹಾಗೂ ಭಕ್ತರು ಉಪಸ್ಥಿತರಿದ್ದರು.

### ಪಾಲಿಟೆಕ್ನಿಕ್ ವಿದ್ಯಾರ್ಥಿಗಳ ಪ್ರವೇಶ ಶುಲ್ಕವನ್ನು ಭರಿಸುವ ಭರವಸೆ ನೀಡಿದ ಶಾಸಕ ಜಿ.ಎಸ್ ಪಾಟೀಲ

# ವಿದ್ಯಾರ್ಥಿಗಳಿಗೆ 'ಫ್ರೀ ಫೀಸ್' ಘೋಷಣೆ



**ವಿಜಯಸಾಕ್ಷಿ ಸುದ್ದಿ, ರೋಣ**

ರೋಣದಲ್ಲಿ ಪುನರಾರಂಭಗೊಂಡಿರುವ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿಗೆ ಪ್ರವೇಶ ಪಡೆಯುವ ಎಲ್ಲ ವಿದ್ಯಾರ್ಥಿಗಳ ಪ್ರವೇಶ ಶುಲ್ಕವನ್ನು ತಾವೇ ಭರಿಸುವುದಾಗಿ ಶಾಸಕ ಜಿ.ಎಸ್. ಪಾಟೀಲ ಘೋಷಿಸಿದರು.

ಸೋಮವಾರ ಮುದೇನಗುಡಿ ರಸ್ತೆಯಲ್ಲಿರುವ ಸರ್ಕಾರಿ ಪಾಲಿಟೆಕ್ನಿಕ್ ಮಹಾವಿದ್ಯಾಲಯದಲ್ಲಿ ಆಯೋಜಿಸಿದ್ದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

2013ರಲ್ಲಿ ಶಾಸಕನಾಗಿದ್ದ ವೇಳೆ ರೋಣಕ್ಕೆ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮಂಜೂರಾಗಿದ್ದು, 8 ಕೋಟಿ ರೂ. ವೆಚ್ಚದಲ್ಲಿ ಕಟ್ಟಡ ನಿರ್ಮಿಸಲಾಗಿತ್ತು. ಬಳಿಕ ಕಾಲೇಜು ಮಾಗಡಿಗೆ ಸ್ಥಳಾಂತರಗೊಂಡಿತ್ತು. ಇದೀಗ ಮತ್ತೆ ರೋಣಕ್ಕೆ ಮರಳಿ ತರಲಾಗಿದ್ದು, 240 ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅಗತ್ಯ ಸೌಲಭ್ಯ ಕಲ್ಪಿಸಲಾಗಿದೆ ಎಂದು ಹೇಳಿದರು.

ಈಗಾಗಲೇ 40ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದು, ಸರ್ಕಾರಿ ನಿಯಮದಂತೆ ವಿದ್ಯಾರ್ಥಿಯೊಬ್ಬರಿಗೆ 5 ಸಾವಿರ ರೂ. ಶುಲ್ಕವಿದೆ. ಆದರೆ ಎಲ್ಲ ವಿದ್ಯಾರ್ಥಿಗಳ ಪ್ರವೇಶ ಶುಲ್ಕವನ್ನು ತಾವೇ ಭರಿಸಲಿದ್ದು, ಈಗಾಗಲೇ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳಿಗೆ ಹಣವನ್ನು ಹಿಂತಿರುಗಿಸಲಾಗುವುದು ಎಂದು ತಿಳಿಸಿದರು.

> ವಿದ್ಯಾರ್ಥಿಗಳಲ್ಲಿ ಕಲಿಕೆಯ ಹಸಿವು ಇರಬೇಕು. ಪ್ರಾಮಾಣಿಕತೆ, ಪರಿಶ್ರಮ ಮತ್ತು ಶ್ರದ್ಧೆಯೇ ಯಶಸ್ಸಿನ ನಿಜವಾದ ಬಂಡವಾಳ.
>
> **-ಗುರುಪಾದ ದೇವರು**

ಕಾಲೇಜಿನ ಅಭಿವೃದ್ಧಿಗೆ 2.50 ಕೋಟಿ ರೂ. ಅನುದಾನ ಬಿಡುಗಡೆ ಮಾಡಲಾಗಿದ್ದು, ಶೀಘ್ರದಲ್ಲೇ ವರ್ಕ್‌ಶಾಪ್ ಹಾಗೂ ಕಾಂಪೌಂಡ್ ನಿರ್ಮಿಸಲಾಗುವುದು. ಅಲ್ಲದೆ 50 ಕೋಟಿ ರೂ. ವೆಚ್ಚದ ಜೆಟಿಟಿಸಿ ಮಹಾವಿದ್ಯಾಲಯದ ಮೊದಲ ಹಂತದ ಕಾಮಗಾರಿ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಕಾಲೇಜು ಆರಂಭಿಸಲಾಗುವುದು. ಪಾಲಿಟೆಕ್ನಿಕ್ ಹಾಗೂ ಜೆಟಿಟಿಸಿ ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಸಂದರ್ಶನದ ಮೂಲಕ ಉದ್ಯೋಗಾವಕಾಶ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ಗುರುಪಾದ ದೇವರು ಮಾತನಾಡಿ, ವಿದ್ಯಾರ್ಥಿಗಳು ಪ್ರಾಮಾಣಿಕತೆ, ಪರಿಶ್ರಮ ಮತ್ತು ಶ್ರದ್ಧೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಯವನ್ನು ವ್ಯರ್ಥ ಮಾಡದೆ ನಿರಂತರ ಕಲಿಕೆಯತ್ತ ಗಮನಹರಿಸಿದರೆ ಮಾತ್ರ ಉಜ್ವಲ ಭವಿಷ್ಯ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಸಿದ್ದಣ್ಣ ಬಂಡಿ, ಬಸವರಾಜ ನವಲಗುಂದ, ಯೂಸುಫ್ ಇಟಗಿ, ಮುತ್ತಣ್ಣ ಸಂಗಳದ, ಶಫೀಕ್ ಮೂಗನೂರ, ಶಿವಪ್ಪ ಕರಿಲಿಂಗಣ್ಣವರ, ರಂಗವ್ವ ಭಜಂತ್ರಿ, ಅಭಿಷೇಕ ನವಲಗುಂದ, ಯಲ್ಲಪ್ಪ ಕಿರೇಸೂರ, ಪ್ರಾಂಶುಪಾಲ ಮಹಾಂತೇಶ ಗುದ್ದಿನ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ಹಾವೇರಿಯಲ್ಲಿ ಮೂರು ದಿನಗಳ ಕಾರ್ಯಾಚರಣೆ; ಉತ್ತರ ಕರ್ನಾಟಕಕ್ಕೂ ವಿಸ್ತರಣೆಗೆ ಸಿಎಂ ಭೇಟಿಗೆ ನಿರ್ಧಾರ

# ಬರದ ಬೆನ್ನಲ್ಲೇ ಮೋಡ ಬಿತ್ತನೆಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಉತ್ತರ ಕರ್ನಾಟಕದಲ್ಲಿ ತೀವ್ರ ಮಳೆ ಕೊರತೆಯಿಂದ ಸಂಕಷ್ಟ ಎದುರಿಸುತ್ತಿರುವ ರೈತರಿಗೆ ನೆರವಾಗುವ ನಿಟ್ಟಿನಲ್ಲಿ ಹಾವೇರಿ ಜಿಲ್ಲೆಯಲ್ಲಿ ಮೂರು ದಿನಗಳ ಕಾಲ ಮೋಡ ಬಿತ್ತನೆ ಕಾರ್ಯಾಚರಣೆಗೆ ಭಾನುವಾರ ಚಾಲನೆ ನೀಡಲಾಯಿತು.

ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಮೋಡ ಬಿತ್ತನೆಗೆ ಚಾಲನೆ ನೀಡಿ ಮಾತನಾಡಿದ ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಹಾವೇರಿ ಜಿಲ್ಲೆಯ ಎಲ್ಲ ಶಾಸಕರ ಒಮ್ಮತದೊಂದಿಗೆ ಈ ಕಾರ್ಯ ಆರಂಭಿಸಲಾಗಿದ್ದು, ಉತ್ತರ ಕರ್ನಾಟಕದ ಇತರೆ ಜಿಲ್ಲೆಗಳಲ್ಲಿಯೂ ಮೋಡ ಬಿತ್ತನೆ ನಡೆಸಲು ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಉತ್ತರ ಕರ್ನಾಟಕ ಭಾಗದಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿದ್ದು, ರೈತರ ಬೆಳೆಗಳು ಹಾನಿಗೊಳಗಾಗಿವೆ. ಬೆಳೆ ಹಾನಿ ಕುರಿತು ಸಮೀಕ್ಷೆ ನಡೆಸುವಂತೆ ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ. ಮೋಡ ಬಿತ್ತನೆಗೆ ಮುಂದಾಗಿರುವ ಎಲ್ಲ ಶಾಸಕರನ್ನು ಅಭಿನಂದಿಸುವುದಾಗಿ ಹೇಳಿದರು.

> ಹಾವೇರಿಯಲ್ಲಿ ಆರಂಭವಾದ ಮೋಡ ಬಿತ್ತನೆ ಯಶಸ್ವಿಯಾದರೆ ಉತ್ತರ ಕರ್ನಾಟಕದ ಇತರೆ ಜಿಲ್ಲೆಗಳಿಗೂ ವಿಸ್ತರಿಸಲು ಮುಖ್ಯಮಂತ್ರಿಗಳ ಬಳಿ ಮನವಿ ಮಾಡಲಾಗುವುದು.
>
> **-ಸತೀಶ ಜಾರಕಿಹೊಳಿ**

ಶಾಸಕ ಪ್ರಕಾಶ ಕೋಳಿವಾಡ ಮಾತನಾಡಿ, ಹಾವೇರಿ 3ನೇ ಪುಟಕ್ಕೆ.....

## ತಾಯಿಯ ಹೆಸರಲ್ಲಿ ಗಿಡ ನೆಡಿ: ಬಿಜೆಪಿ ಅಭಿಯಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ನಗರ ಮಂಡಲ ವತಿಯಿಂದ 'ಏಕ್ ಪೇಡ್ ಮಾ ಕೇ ನಾಮ್' ಅಭಿಯಾನದ ಅಂಗವಾಗಿ ನಗರದ ವಾರ್ಡ್ ಸಂಖ್ಯೆ 11ರ ಉದ್ಯಾನವನದಲ್ಲಿ ಅರಣ್ಯ ಇಲಾಖೆಯ ಸಹಯೋಗದೊಂದಿಗೆ 30 ಸಸಿಗಳನ್ನು ನೆಡುವ ಕಾರ್ಯಕ್ರಮ ನಡೆಯಿತು.

ನಗರಸಭೆ ಸದಸ್ಯೆ ಶ್ವೇತಾ ದಂಡಿನ ಹಾಗೂ ಬೂತ್ ಅಧ್ಯಕ್ಷ ಅವಿನಾಶ ಹೊನಗುಡಿ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಅನೀಲ ಅಬ್ಬಿಗೇರಿ, ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ಶಂಕರ ಕಾಕಿ, ಶಶಿಧರ ದಿಂಡೂರ, ಮೋಹನ ಹೊನಗುಡಿ, ರಾಜು ಮುಧೋಳ, ವಿ.ಕೆ. ಗುರುಮಠ, ಸುದರ್ಶನ ಹಾನಗಲ್ ಸೇರಿದಂತೆ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ವಾರ್ಡ್‌ನ ನಿವಾಸಿಗಳು ಭಾಗವಹಿಸಿದರು.

ಕಾರ್ಯಕ್ರಮದಲ್ಲಿ ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಟ್ಟು, ಪರಿಸರ ಸಂರಕ್ಷಣೆ ಹಾಗೂ ಆರೋಗ್ಯಕರ ಬದುಕಿನ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

### ಕೆಂಪು ಮೆಣಸಿನಕಾಯಿ ಬೆಳೆಗಾರರಿಗೆ ನ್ಯಾಯ ಒದಗಿಸಿ; ಓರಿಯಂಟಲ್ ಇನ್ಶುರೆನ್ಸ್ ವಿರುದ್ಧ ಕ್ರಮಕ್ಕೆ ಸರ್ಕಾರಕ್ಕೆ ಆಗ್ರಹ

# ರೂ. 28 ಕೋಟಿ ಬೆಳೆವಿಮೆ ಪರಿಹಾರ ಬಾಕಿ



**ವಿಜಯಸಾಕ್ಷಿ ಸುದ್ದಿ, ಡಂಬಳ**

ಗದಗ ಜಿಲ್ಲೆಯಲ್ಲಿ 2025ರ ಖಾರಿಫ್ ಹಂಗಾಮಿನ ಬೆಳೆವಿಮೆ ಪರಿಹಾರ ಹಾಗೂ ಸಿಸಿಇ (ಕ್ರಾಪ್ ಕಟಿಂಗ್ ಎಕ್ಸ್‌ಪೆರಿಮೆಂಟ್) ಪಾವತಿ ವಿಚಾರದಲ್ಲಿ ರೈತರಿಗೆ ತೀವ್ರ ಅನ್ಯಾಯವಾಗುತ್ತಿದ್ದು, ಓರಿಯಂಟಲ್ ಇನ್ಶುರೆನ್ಸ್ ಕಂಪನಿ ಹಾಗೂ ಸಂಬಂಧಿಸಿದ ಅಧಿಕಾರಿಗಳು ರೈತರನ್ನು ಸಂಕಷ್ಟಕ್ಕೆ ತಳ್ಳಿದ್ದಾರೆ ಎಂದು ಅಖಿಲ ಕರ್ನಾಟಕ ರಾಜ್ಯ ಕಿಸಾನ ಜಾಗೃತಿ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪಗೌಡ ಕರಮುಡಿ ಆರೋಪಿಸಿದರು.

ಡಂಬಳದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಓರಿಯಂಟಲ್ ಇನ್ಶುರೆನ್ಸ್ ಕಂಪನಿ ಲಿಮಿಟೆಡ್ ಬೆಂಗಳೂರು ವತಿಯಿಂದ ಜಂಟಿ ಕೃಷಿ ನಿರ್ದೇಶಕರಿಗೆ ಕಳುಹಿಸಿರುವ ಪತ್ರದಲ್ಲಿ 2025ರ ಖಾರಿಫ್ ಹಂಗಾಮಿನ ವಿವಿಧ ಬೆಳೆಗಳಿಗೆ ಒಟ್ಟು ರೂ.89.71 ಕೋಟಿ ಸಿಸಿಇ ಕ್ಲೈಮ್ ಪ್ರಾರಂಭಿಸಲಾಗಿದೆ ಎಂದು ಉಲ್ಲೇಖಿಸಲಾಗಿದೆ. ಆದರೆ 80-110 (ಕಪ್ ಮತ್ತು ಕ್ಯಾಪ್) ಮಾದರಿಯ ಪ್ರಕಾರ ಕಂಪನಿಯ ಹೊಣೆಗಾರಿಕೆ ರೂ.45 ಕೋಟಿ ಮಾತ್ರವಾಗಿದೆ. ಇದರಲ್ಲಿ ಈಗಾಗಲೇ ರೂ.16.17 ಕೋಟಿ ಎಲ್‌ಸಿ ಪಾವತಿ ಹಾಗೂ ರೂ.60.50 ಲಕ್ಷ ಆರಂಭಿಕ ಸಿಸಿಇ ಪಾವತಿಗೆ ಬಳಸಲಾಗಿದೆ ಎಂದು ತಿಳಿಸಲಾಗಿದೆ ಎಂದರು.

ರಾಜ್ಯ ಕೃಷಿ ಇಲಾಖೆಯಿಂದ ಬಾಕಿ ಮೊತ್ತ ಬಿಡುಗಡೆಯಾಗದ ಕಾರಣ ಸಂಪೂರ್ಣ ಸಿಸಿಇ ಪರಿಹಾರವನ್ನು ಬಿಡುಗಡೆ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಕಂಪನಿ ತನ್ನ ಪತ್ರದಲ್ಲಿ ಸ್ಪಷ್ಟಪಡಿಸಿರುವುದನ್ನೂ ಅವರು ಉಲ್ಲೇಖಿಸಿದರು.

ಜೂನ್ 25, 2026ರಂದು ಗದಗ ಜಿಲ್ಲಾಧಿಕಾರಿ ಕಚೇರಿಯಲ್ಲಿ ವಿವಿಧ ರೈತ ಸಂಘಗಳೊಂದಿಗೆ 3ನೇ ಪುಟಕ್ಕೆ.....

### ಶಿರಹಟ್ಟಿ ಟಿಎಪಿಸಿಎಂಎಸ್ ನೂತನ ಕಟ್ಟಡ ಉದ್ಘಾಟಿಸಿದ ಮಾಜಿ ಸಿಎಂ ಬೊಮ್ಮಾಯಿ

# ರೈತರಿಗೆ ವೈಜ್ಞಾನಿಕ ಬೆಲೆ ನಿಗದಿ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**



ರೈತರ ಆದಾಯ ಮತ್ತು ಬದುಕು ಸ್ಥಿರವಾಗಬೇಕಾದರೆ ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ನಿಗದಿ ಮಾಡುವ ವ್ಯವಸ್ಥೆ ಜಾರಿಗೆ ಬರಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ರವಿವಾರ ತಡರಾತ್ರಿ ಶಿರಹಟ್ಟಿ ಪಟ್ಟಣದಲ್ಲಿ ಶಿರಹಟ್ಟಿ ತಾಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘ (ಟಿಎಪಿಸಿಎಂಎಸ್) ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

> "ರೈತರ ಬದುಕು ಭದ್ರವಾಗಬೇಕಾದರೆ ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಬೆಲೆ ನಿಗದಿ ಜಾರಿಯಾಗಬೇಕು. ಸಹಕಾರಿ ಸಂಸ್ಥೆಗಳೇ ರೈತರ ಆರ್ಥಿಕ ಶಕ್ತಿಯ ಕೇಂದ್ರವಾಗಬೇಕು."
>
> **-ಬಸವರಾಜ ಬೊಮ್ಮಾಯಿ**

ಕರ್ನಾಟಕದ ಸಹಕಾರಿ ಚಳುವಳಿಗೆ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದೆ. ರೈತರು ಮಧ್ಯವರ್ತಿಗಳ ಹಾವಳಿ ಹಾಗೂ ಕಮಿಷನ್ ಇಲ್ಲದೆ ತಾವು ಬೆಳೆದ ಬೆಳೆಗಳಿಗೆ ನ್ಯಾಯಯುತ 3ನೇ ಪುಟಕ್ಕೆ

ಶಿಕ್ಷಣ ದಾಸೋಹಕ್ಕೆ ಸಂಸದರ ನಿಧಿಯಿಂದ ನೆರವಿನ ಭರವಸೆ; ಹರ್ಲಾಪೂರ ಮಠದ ಜಾತ್ರೆಯಲ್ಲಿ ಮಾಜಿ ಸಿಎಂ

# ಕೊಟ್ಟೂರೇಶ್ವರ ಮಠದ ಸೇವೆಗೆ ಬೊಮ್ಮಾಯಿ ಮೆಚ್ಚುಗೆ




ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸಂಸ್ಕೃತಿ, ಸಂಪ್ರದಾಯ ಹಾಗೂ ಪರಂಪರೆಯ ರಕ್ಷಣೆಗೆ ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಹರ್ಲಾಪೂರದ ಕೊಟ್ಟೂರೇಶ್ವರ ಮಠ ಮುಂಚೂಣಿಯಲ್ಲಿದ್ದು, ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಮೌಲಿಕ ಸೇವೆ ಸಲ್ಲಿಸುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

> ಸಂಸ್ಕೃತಿ, ಸಂಪ್ರದಾಯ ಮತ್ತು ಮೌಲ್ಯಗಳನ್ನು ಉಳಿಸುವಲ್ಲಿ ಹರ್ಲಾಪೂರ ಕೊಟ್ಟೂರೇಶ್ವರ ಮಠದ ಸೇವೆ ಶ್ಲಾಘನೀಯ. ಶಿಕ್ಷಣ ದಾಸೋಹಕ್ಕೆ ಸಂಸದರ ನಿಧಿಯಿಂದ ನೆರವು ನೀಡಲು ಸಿದ್ಧನಿದ್ದೇನೆ.
> —ಬಸವರಾಜ ಬೊಮ್ಮಾಯಿ

ಲಕ್ಕುಂಡಿ ಸಮೀಪದ ಹರ್ಲಾಪೂರ ಕೊಟ್ಟೂರೇಶ್ವರ ಮಠದ 138ನೇ ಜಾತ್ರಾ ಮಹೋತ್ಸವ ಅಂಗವಾಗಿ ನಡೆದ ಹಠಯೋಗಿ ಕೊಟ್ಟೂರೇಶ್ವರರ 16ನೇ ದಿನದ ಪುರಾಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶರಣ-ಶರಣೆಯರ ಆದರ್ಶ ಜೀವನ, ಸಂಸ್ಕೃತಿ, ಸಂಪ್ರದಾಯ ಹಾಗೂ ಮೌಲ್ಯಗಳನ್ನು ಪುರಾಣ ಪ್ರವಚನಗಳ ಮೂಲಕ ಜನರಿಗೆ ತಲುಪಿಸುವ ಕಾರ್ಯವನ್ನು ಮಠ ನಿರಂತರವಾಗಿ ಮಾಡುತ್ತಿರುವುದು ಶ್ಲಾಘನೀಯ ಎಂದರು.

ಮಠದ ಪೀಠಾಧಿಪತಿಗಳಾದ ಡಾ. ಕೊಟ್ಟೂರೇಶ್ವರ ಶ್ರೀಗಳು ಕೃಷಿ ಕಾಯಕದಲ್ಲೂ ತೊಡಗಿಕೊಂಡಿರುವುದು ಮಾದರಿಯಾಗಿದೆ. ಮಠವು ಶಿಕ್ಷಣ ದಾಸೋಹದ ಯೋಜನೆ ಕೈಗೊಂಡರೆ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಅಗತ್ಯ ನೆರವು ನೀಡಲಾಗುವುದು ಎಂದು ಭರವಸೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ಡಾ. ಕೊಟ್ಟೂರೇಶ್ವರ ಶ್ರೀಗಳು ಮಾತನಾಡಿ, ಬಸವರಾಜ ಬೊಮ್ಮಾಯಿ ಅವರು ಮಠ-ಮಾನ್ಯಗಳ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದು, ಮಠದ ಆಹ್ವಾನಕ್ಕೆ ಸ್ಪಂದಿಸಿ ಆಗಮಿಸಿರುವುದು ಸಂತಸದ ವಿಷಯವಾಗಿದೆ. ಕೊಟ್ಟೂರೇಶ್ವರರ ಆಶೀರ್ವಾದ ಸದಾ ಅವರ ಮೇಲಿರಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಬಸವರಾಜ ಬೊಮ್ಮಾಯಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ, ಬಿಜೆಪಿ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ, ರೋಣ ಬಿಜೆಪಿ ಮಂಡಲ ಅಧ್ಯಕ್ಷ ಉಮೇಶ ಮಲ್ಲಾಪೂರ, ಡಂಬಳ ಬಿಜೆಪಿ ಮಂಡಲ ಅಧ್ಯಕ್ಷ ಅಂದಪ್ಪ ಹಾರೋಗೇರಿ ಉಪಸ್ಥಿತರಿದ್ದರು.

ಶಿಕ್ಷಕ ಕೆ.ಬಿ. ಕೊಣ್ಣೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆ.ಎಂ. ಮಜ್ಜಿಗುಡ್ಡ ಸ್ವಾಗತಿಸಿದರು. ವೆಂಕಟೇಶ ಜುಂಜಣಿ ನಿರೂಪಿಸಿದರು. ರಾಮಣ್ಣ ಬೆಳಧಡಿ ವಂದಿಸಿದರು.

# 'ಜೀವನ ಧಾರಾ' ಮೂಲಕ ಮಾನವೀಯ ನೆರವು



ವಿಜಯಸಾಕ್ಷಿ ಸುದ್ದಿ, ಗದಗ

ಇನ್ನರ್ ವೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ "ಜೀವನ ಧಾರಾ" ಯೋಜನೆಯಡಿ ಆರ್ಥಿಕವಾಗಿ ಹಿಂದುಳಿದ, ಅಂಧತ್ವ ಹಾಗೂ ಅಂಗವಿಕಲತೆಯಿಂದ ಬಳಲುತ್ತಿರುವ ವೀರೇಶ ಅಬ್ಬಿಗೇರಿ ಅವರಿಗೆ ಎರಡು ಸಿಟಿಂಗ್‌ಗಳ ಡಯಾಲಿಸಿಸ್ ಚಿಕಿತ್ಸೆಗೆ ಅಗತ್ಯವಾದ ಆರ್ಥಿಕ ನೆರವು ನೀಡಲಾಯಿತು.

ಈ ಸಂದರ್ಭದಲ್ಲಿ ಕ್ಲಬ್ ಅಧ್ಯಕ್ಷೆ ಮಂಜುಳಾ ಅಕ್ಕಿ ಮಾತನಾಡಿ, ಸಂಕಷ್ಟದಲ್ಲಿರುವವರಿಗೆ ಸಮಯೋಚಿತ ನೆರವು ನೀಡುವುದು ಸಂಸ್ಥೆಯ ಧ್ಯೇಯವಾಗಿದೆ.ಸಮಾಜದ ದುರ್ಬಲ ವರ್ಗಗಳ ಕಲ್ಯಾಣಕ್ಕಾಗಿ ಇಂತಹ ಸೇವಾ ಚಟುವಟಿಕೆಗಳನ್ನು ಮುಂದೆಯೂ ನಿರಂತರವಾಗಿ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಡಯಾಲಿಸಿಸ್ ಚಿಕಿತ್ಸೆ ಪಡೆಯುತ್ತಿರುವ ವೀರೇಶ ಅಬ್ಬಿಗೇರಿ ಹಾಗೂ ಅವರ ಕುಟುಂಬ ಸದಸ್ಯರನ್ನು ಭೇಟಿ ಮಾಡಿದ ಪದಾಧಿಕಾರಿಗಳು ಧೈರ್ಯ ತುಂಬಿ, ಶೀಘ್ರ ಗುಣಮುಖರಾಗುವಂತೆ ಹಾರೈಸಿದರು. ಕ್ಲಬ್ ಸದಸ್ಯೆ ಡಾ.ಶಿಲ್ಪಾ ಧಡೂತಿ ಅವರು ಈ ಸೇವಾ ಕಾರ್ಯಕ್ಕೆ ಕೈಜೋಡಿಸಿ, ನೆರವು ನಿಜವಾದ ಫಲಾನುಭವಿಗೆ ತಲುಪುವಂತೆ ಸಹಕರಿಸಿದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಪೂಜಾ ಭೂಮಾ, ಜಂಟಿ ಕಾರ್ಯದರ್ಶಿ ಪುಷ್ಪಾ ಭಂಡಾರಿ, ಖಜಾಂಚಿ ವೀಣಾ ಕಾವೇರಿ, ಐಎಸ್‌ಒ ವಿದ್ಯಾ ಶಿವನಗುತ್ತಿ, ಸಂಪಾದಕಿ ಮೀನಾಕ್ಷಿ ಕೊರವನವರ, ಕೋಸಿಪಿಸಿಸಿ ಶಾರದಾ ಸಜ್ಜನ ಸೇರಿದಂತೆ ಕ್ಲಬ್‌ನ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಆಹಾರ, ವ್ಯಾಯಾಮ, ಪಾದದ ಆರೈಕೆ ಜತೆಗೆ ಮಾನಸಿಕ ಬೆಂಬಲವೂ ಅಗತ್ಯ: ಡಾ. ಅನ್ವರ್ ಹುಸೇನ್

# ಮಧುಮೇಹ ನಿಯಂತ್ರಣಕ್ಕೆ ನರ್ಸ್‌ಗಳ ಪಾತ್ರ ಮಹತ್ವದ್ದು



ವಿಜಯಸಾಕ್ಷಿ ಸುದ್ದಿ, ಗದಗ

ಮಧುಮೇಹವನ್ನು ಕೇವಲ ಔಷಧಗಳಿಂದ ನಿಯಂತ್ರಿಸಲು ಸಾಧ್ಯವಿಲ್ಲ. ಆಹಾರ ಪದ್ಧತಿ, ನಿಯಮಿತ ವ್ಯಾಯಾಮ, ಪಾದದ ಆರೈಕೆ ಹಾಗೂ ಮಾನಸಿಕ ಬೆಂಬಲದಂತಹ ಅಂಶಗಳು ಸಮಾನವಾಗಿ ಮಹತ್ವದ್ದಾಗಿದ್ದು, ರೋಗಿಯ ಆರೈಕೆಯಲ್ಲಿ ನರ್ಸ್‌ಗಳ ಪಾತ್ರ ಅತ್ಯಂತ ಪ್ರಮುಖವಾಗಿದೆ ಎಂದು ಸಿಎಂಸಿ ವೆಲ್ಲೂರಿನ ಹಿರಿಯ ಎಂಡೋಕ್ರೈನಾಲಜಿಸ್ಟ್ ಡಾ. ಅನ್ವರ್ ಹುಸೇನ್ ಹೇಳಿದರು.

ಕ್ರಿಶ್ಚಿಯನ್ ಮೆಡಿಕಲ್ ಕಾಲೇಜು (ಸಿಎಂಸಿ), ವೆಲ್ಲೂರು ಹಾಗೂ ಬಾಸೆಲ್ ಮಿಷನ್ ಸಿಎಸ್‌ಐ ಆಸ್ಪತ್ರೆ, ಗದಗ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕ್ಲಾರ್ಕ್ಸ್ ಇನ್ ಹೋಟೆಲ್ ಸಭಾಂಗಣದಲ್ಲಿ ಶನಿವಾರ ಆಯೋಜಿಸಿದ್ದ 'ಮಧುಮೇಹ ನಿರ್ವಹಣೆ' ಕುರಿತ ಒಂದು ದಿನದ ನಿರಂತರ ನರ್ಸಿಂಗ್ ಶಿಕ್ಷಣ (ಸಿಎನ್‌ಇ) ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಮಧುಮೇಹ ಚಿಕಿತ್ಸೆಯಲ್ಲಿನ ಹೊಸ ವಿಧಾನಗಳು, ಇನ್ಸುಲಿನ್ ನಿರೋಧಕತೆ ಹಾಗೂ ಗರ್ಭಾವಸ್ಥೆಯ ಮಧುಮೇಹ ನಿರ್ವಹಣೆ ಕುರಿತು ಸವಿಸ್ತಾರವಾಗಿ ವಿವರಿಸಿದ ಅವರು, ರೋಗಿಗೆ ಸಮಗ್ರ ಆರೈಕೆ ದೊರೆತಾಗ ಮಾತ್ರ ಉತ್ತಮ ಫಲಿತಾಂಶ ಸಾಧ್ಯವಾಗುತ್ತದೆ ಎಂದರು.

ಡಯಾಬಿಟಿಕ್ ನರ್ಸ್ ಎಜುಕೇಟರ್ ವಿಜಯಲಕ್ಷ್ಮಿ ಅವರು ಸುರಕ್ಷಿತ ಇನ್ಸುಲಿನ್ ಚುಚ್ಚುಮದ್ದು ತಂತ್ರ, ಇನ್ಸುಲಿನ್ ಪೆನ್ ಬಳಕೆ, ಹೈಪೋಗ್ಲೈಸೆಮಿಯಾ ತುರ್ತು ನಿರ್ವಹಣೆ ಹಾಗೂ ಸ್ವಯಂ ರಕ್ತದ ಗ್ಲುಕೋಸ್ ಪರೀಕ್ಷೆ ಮಾಡುವ ವಿಧಾನಗಳ ಕುರಿತು ಪ್ರಾಯೋಗಿಕ ಪ್ರದರ್ಶನ ನೀಡಿದರು.

> ಮಧುಮೇಹ ಚಿಕಿತ್ಸೆಯಲ್ಲಿ ಔಷಧ ಮಾತ್ರ ಸಾಕಾಗುವುದಿಲ್ಲ. ಆಹಾರ, ವ್ಯಾಯಾಮ, ಪಾದದ ಆರೈಕೆ ಮತ್ತು ಮಾನಸಿಕ ಬೆಂಬಲವನ್ನು ಸಮನ್ವಯಗೊಳಿಸಿದಾಗಲೇ ರೋಗವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಸಾಧ್ಯ.
> —ಡಾ. ಅನ್ವರ್ ಹುಸೇನ್
> ಹಿರಿಯ ಎಂಡೋಕ್ರೈನಾಲಜಿಸ್ಟ್, ಸಿಎಂಸಿ ವೆಲ್ಲೂರು

ಬಾಸೆಲ್ ಮಿಷನ್ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲೆ ಪ್ರೊ. ಬ್ಯೂಲಾ ಪ್ರಿಯದರ್ಶಿನಿ ಮಾತನಾಡಿ, ಭಾರತೀಯ ನರ್ಸಿಂಗ್ ಪರಿಷತ್ತಿನ ಮಾರ್ಗಸೂಚಿಯಂತೆ ಉತ್ತರ ಕರ್ನಾಟಕದಲ್ಲಿ ಇಂತಹ ವಿಶೇಷ ತರಬೇತಿ ಕಾರ್ಯಕ್ರಮಗಳ ಅಗತ್ಯ ಹೆಚ್ಚಿದ್ದು, ನರ್ಸ್‌ಗಳ ಕೌಶಲ್ಯ ವೃದ್ಧಿಗೆ ಇದು ಸಹಕಾರಿಯಾಗಿದೆ ಎಂದರು.

ಬಾಸೆಲ್ ಮಿಷನ್ ಸಿಎಸ್‌ಐ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ. ಅಜಯ್ ರಾಜು ಮಾತನಾಡಿ, ಐಸಿಎಂಆರ್–ಇಂಡಿಯಾಬ್ ಅಧ್ಯಯನದ ಪ್ರಕಾರ ಕರ್ನಾಟಕದಲ್ಲಿ 18 ವರ್ಷ ಮೇಲ್ಪಟ್ಟವರಲ್ಲಿ ಶೇ.11.2ರಷ್ಟು ಜನ ಮಧುಮೇಹದಿಂದ ಬಳಲುತ್ತಿದ್ದಾರೆ. ಗ್ರಾಮೀಣ ಪ್ರದೇಶಗಳಲ್ಲಿ ರೋಗ ತಡವಾಗಿ ಪತ್ತೆಯಾಗುತ್ತಿರುವುದರಿಂದ ಪ್ರಾಥಮಿಕ ಹಂತದಲ್ಲೇ ನರ್ಸ್‌ಗಳು ತಪಾಸಣೆ, ಮಾರ್ಗದರ್ಶನ ಹಾಗೂ ಆರೋಗ್ಯ ಶಿಕ್ಷಣ ನೀಡುವುದು ಅತ್ಯಂತ ಅಗತ್ಯ ಎಂದು ಹೇಳಿದರು.

ಗದಗ ಜಿಲ್ಲೆಯ ಸರ್ಕಾರಿ ಹಾಗೂ ಖಾಸಗಿ ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ನರ್ಸಿಂಗ್ ಕಾಲೇಜುಗಳಿಂದ 125ಕ್ಕೂ ಹೆಚ್ಚು ನರ್ಸ್‌ಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ತಜ್ಞರಿಂದ ಪ್ರಾಯೋಗಿಕ ಹಾಗೂ ಸಾಕ್ಷ್ಯಾಧಾರಿತ ತರಬೇತಿ ಪಡೆದರು.

ಕಾರ್ಯಕ್ರಮದಲ್ಲಿ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಹ ಪ್ರಾಧ್ಯಾಪಕ ಡಾ. ಸ್ಟೀಫನ್, ಹಿರಿಯ ಶುಶ್ರೂಷಾಧಿಕಾರಿಗಳು ಹಾಗೂ ನರ್ಸಿಂಗ್ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.


## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545


ರೋಗದ ಜೊತೆಗೆ ಮನಸ್ಸಿನ ನೋವಿಗೂ ಚಿಕಿತ್ಸೆ ನೀಡಿದಾಗಲೇ ಆರೋಗ್ಯಕರ ಸಮಾಜ ನಿರ್ಮಾಣ

# ವೈದ್ಯರು ಡಬಲ್ ಡಾಕ್ಟರ್ ಆಗಬೇಕು




ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ವೈದ್ಯರ ದಿನಾಚರಣೆಯ ಅಂಗವಾಗಿ ಗದುಗಿನ ಸಿದ್ಧರಾಮೇಶ್ವರ ನಗರದ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ವೈದ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ರಾಜಯೋಗಿನಿ ಬ್ರಹ್ಮಕುಮಾರಿ ಜಯಂತಿ ಅವರು, ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ಹಾಗೂ ಖ್ಯಾತ ವೈದ್ಯ ಡಾ.ಬಿ.ಸಿ.ರಾಯ್ ಅವರ ನಿಸ್ವಾರ್ಥ ಸೇವೆಯನ್ನು ಸ್ಮರಿಸಿ, ವೈದ್ಯಕೀಯ ಸೇವೆ ಎಂದರೆ ಕೇವಲ ವೃತ್ತಿಯಲ್ಲ, ಅದು ಮಾನವೀಯ ಸೇವೆಯಾಗಿದೆ ಎಂದು ಹೇಳಿದರು.

ರೋಗಿಗಳಿಗೆ ಔಷಧೋಪಚಾರ ನೀಡುವ ವೈದ್ಯರು ದೇಹದ ಕಾಯಿಲೆಗಳನ್ನು ಗುಣಪಡಿಸುತ್ತಾರೆ. ಆದರೆ ಇಂದಿನ ಬಹುತೇಕ ಕಾಯಿಲೆಗಳ ಮೂಲ ಮನಸ್ಸಿನ ಒತ್ತಡ, ಭಯ, ಆತಂಕ ಹಾಗೂ ಅಶಾಂತಿಯಾಗಿರುವುದರಿಂದ ವೈದ್ಯರು ದೈಹಿಕ ಚಿಕಿತ್ಸೆಯ ಜೊತೆಗೆ ಮಾನಸಿಕ ಆರೋಗ್ಯಕ್ಕೂ ಆದ್ಯತೆ ನೀಡಬೇಕು.ರಾಜಯೋಗ ಧ್ಯಾನದಂತಹ ಆಧ್ಯಾತ್ಮಿಕ ವಿಧಾನಗಳು ರೋಗಿಗಳ ಮನಸ್ಸಿಗೆ ನೆಮ್ಮದಿ ನೀಡುವಲ್ಲಿ ಸಹಕಾರಿಯಾಗುತ್ತವೆ ಎಂದು ತಿಳಿಸಿದರು.

ಈಶ್ವರೀಯ ವಿಶ್ವ ವಿದ್ಯಾಲಯ ಆತ್ಮದಲ್ಲಿರುವ ಕ್ರೋಧ, ಲೋಭ, ಅಹಂಕಾರ, ಈರ್ಷೆ, ದ್ವೇಷದಂತಹ ನಕಾರಾತ್ಮಕ ಗುಣಗಳನ್ನು ದೂರ ಮಾಡುವ ಮೂಲಕ ಆಂತರಿಕ ಆರೋಗ್ಯವನ್ನು ಬೆಳೆಸುವ ಕಾರ್ಯ ಮಾಡುತ್ತಿದೆ. ವೈದ್ಯರು ಈ ಜ್ಞಾನವನ್ನು ಅಳವಡಿಸಿಕೊಂಡರೆ ಸಮಾಜಕ್ಕೆ ಇನ್ನಷ್ಟು

ಕಾರ್ಯಕ್ರಮದಲ್ಲಿ ವಿವಿಧ ಆಸ್ಪತ್ರೆಗಳು ಹಾಗೂ ಕ್ಲಿನಿಕ್‌ಗಳ ವೈದ್ಯರನ್ನು ಸನ್ಮಾನಿಸಿ ಗೌರವಿಸಲಾಯಿತು.ಡಾ. ಜಯಕುಮಾರ್ ಬ್ಯಾಳಿ, ಡಾ.ತುಕಾರಾಂ ಸೋರಿ, ಡಾ. ಸಿ.ಬಿ. ಹಿರೇಗೌಡರ್, ಡಾ.ವೆಂಕಟೇಶ್ ಪೂಜಾರ್, ಡಾ.ಈರಣ್ಣ ಹಳೇಮನಿ, ಡಾ.ರಶ್ಮಿ ವಾದೋನಿ, ಡಾ.ಬಸವರಾಜ್ ಚನ್ನಪ್ಪಗೌಡ್ರ, ಡಾ.ಜಿ. ನಾಗರಾಳ, ಡಾ. ಅಶೋಕ್ ಮತ್ತಿಗಟ್ಟಿ, ಡಾ.ಉಮೇಶ್ ಹಾದಿ, ಡಾ.ಸವಿತಾ ನಿಡಗುಂದಿ, ಡಾ.ಸಾಯಿಪ್ರಕಾಶ್ ಮಡಿವಾಳರ್, ಡಾ.ರೋಹಿತ್ ಹಾಗೂ ಡಾ. ಮೇಘಾ ಕೊಪ್ಪಳಕರ್ ಸೇರಿದಂತೆ ಅನೇಕ ವೈದ್ಯರು ಸನ್ಮಾನ ಸ್ವೀಕರಿಸಿದರು.

ಬಿ.ಕೆ.ರೇಖಾ ಸ್ವಾಗತಿಸಿದರು. ಬಿ.ಕೆ.ಸಾವಿತ್ರಿ ವಂದಿಸಿದರು.

# ವ್ಯಾಪಾರಸ್ಥರ ಸಮಸ್ಯೆಗೆ ವಾಣಿಜ್ಯೋದ್ಯಮ ಸಂಸ್ಥೆ ಭರವಸೆ




ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಜಿಎಸ್‌ಟಿ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು ಹಲವು ವರ್ಷಗಳ ಹಿಂದಿನ ವ್ಯವಹಾರಗಳಿಗೆ ಸಂಬಂಧಿಸಿದಂತೆ ನೀಡುತ್ತಿರುವ ನೋಟಿಸ್‌ಗಳಿಂದ ವ್ಯಾಪಾರಸ್ಥರು ಸಂಕಷ್ಟಕ್ಕೆ ಸಿಲುಕಿದ್ದು, ಇಂತಹ ಪ್ರಕರಣಗಳಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಅಗತ್ಯ ನೆರವು ನೀಡಲಿದೆ ಎಂದು ಸಂಸ್ಥೆಯ ಅಧ್ಯಕ್ಷ ಪವನ್ ಚೋಪ್ರಾ ಭರವಸೆ ನೀಡಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಹಾಗೂ ಮುಂಡರಗಿ ವ್ಯಾಪಾರಸ್ಥರ ಸಂಘದ ಸಂಯುಕ್ತ ಆಶ್ರಯದಲ್ಲಿ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಸಭೆಯಲ್ಲಿ ವ್ಯಾಪಾರಸ್ಥರು ಜಿಎಸ್‌ಟಿ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು 5ರಿಂದ 6 ವರ್ಷಗಳ ಹಿಂದಿನ ವ್ಯವಹಾರಗಳಿಗೆ ಸಂಬಂಧಿಸಿದಂತೆ ನೋಟಿಸ್ ನೀಡುತ್ತಿರುವುದರಿಂದ ವ್ಯಾಪಾರ ವಹಿವಾಟಿಗೆ ತೊಂದರೆಯಾಗುತ್ತಿದೆ ಎಂದು ಗಮನ ಸೆಳೆದರು.

ಇದಕ್ಕೆ ಪ್ರತಿಕ್ರಿಯಿಸಿದ ಪವನ್ ಚೋಪ್ರಾ, ಇಂತಹ ಪ್ರಕರಣಗಳಲ್ಲಿ ವ್ಯಾಪಾರಸ್ಥರು ಸಂಸ್ಥೆಯನ್ನು ಸಂಪರ್ಕಿಸಿದರೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚಿಸಿ, ನ್ಯಾಯಸಮ್ಮತವಾಗಿರುವ ಸಮಸ್ಯೆಗಳ ಪರಿಹಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಮುಂಡರಗಿ ಭಾಗದಲ್ಲಿ ಯಾವುದೇ ಪ್ರಮುಖ ಕೈಗಾರಿಕೆಗಳಿಲ್ಲದ ಕಾರಣ ಹೊಸ ಕೈಗಾರಿಕಾ ಪ್ರದೇಶ ಸ್ಥಾಪಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಒತ್ತಾಯಿಸಲಾಯಿತು.

ರೈತರು ಗೋವಿನಜೋಳ ಸೇರಿದಂತೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ವ್ಯಾಪ್ತಿಯ ಕೃಷಿ ಉತ್ಪನ್ನಗಳನ್ನು ಎಪಿಎಂಸಿ ಮಾರುಕಟ್ಟೆಯಲ್ಲಿಯೇ ಮಾರಾಟ ಮಾಡಿದರೆ ಸರ್ಕಾರದ ಪ್ರೋತ್ಸಾಹಧನದ ಲಾಭ ದೊರೆಯುವುದರ ಜೊತೆಗೆ ರೈತರು ಮತ್ತು ವ್ಯಾಪಾರಸ್ಥರ ನಡುವೆ ಉತ್ತಮ ಬಾಂಧವ್ಯ ಬೆಳೆಯಲಿದೆ ಎಂದು ಅಭಿಪ್ರಾಯ ವ್ಯಕ್ತವಾಯಿತು.

ಸಭೆಯಲ್ಲಿ ಉನ್ನತ ಶಿಕ್ಷಣ ಪೂರ್ಣಗೊಳಿಸಿ ಚಾರ್ಟರ್ಡ್ ಅಕೌಂಟೆಂಟ್ (ಸಿಎ) ಆಗಿ ಸಾಧನೆ ಮಾಡಿದ ವ್ಯಾಪಾರಸ್ಥರ ಮಕ್ಕಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು.ಇದೇ ವೇಳೆ ಮುಂಡರಗಿಯ ವರ್ತಕರಾದ ಗಿರೀಶ್ ಹಾವನಾಳ, ಕೊಟ್ರೇಶ್ ಸೇರಿದಂತೆ ಗಣ್ಯರನ್ನು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ವತಿಯಿಂದ ಗೌರವಿಸಲಾಯಿತು.

### ವಿದ್ಯುತ್ ಸಮಸ್ಯೆಗೆ ತ್ವರಿತ ಸ್ಪಂದನೆ, ಗ್ಯಾರಂಟಿ ಯೋಜನೆಗಳ ಸೌಲಭ್ಯ ಅರ್ಹರಿಗೆ ತಲುಪಿಸಿ: ಎಸ್.ಆರ್. ಪಾಟೀಲ ಸೂಚನೆ

# ಪಡಿತರ ಅಕ್ಕಿ ಕಾಳಸಂತೆಗೆ ಬ್ರೇಕ್!



ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಗ್ಯಾರಂಟಿ ಯೋಜನೆಗಳ ಸೌಲಭ್ಯ ಪ್ರತಿಯೊಬ್ಬ ಅರ್ಹ ಫಲಾನುಭವಿಗೂ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.

**–ಎಸ್.ಆರ್. ಪಾಟೀಲ**

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮಳೆಯಿಂದ ಅಥವಾ ಇತರೆ ಕಾರಣಗಳಿಂದ ವಿದ್ಯುತ್ ಸಂಪರ್ಕ ಅಸ್ತವ್ಯಸ್ತಗೊಂಡರೆ ಹೆಸ್ಕಾಂ ಅಧಿಕಾರಿಗಳು ತಕ್ಷಣ ಸಮಸ್ಯೆ ಬಗೆಹರಿಸಬೇಕು. ಕಾಳಸಂತೆಯಲ್ಲಿ ಪಡಿತರ ಅಕ್ಕಿ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಯೋಜನೆಗಳ ಜಿಲ್ಲಾಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಧಾರವಾಡ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಕೆಪಿಟಿಸಿಎಲ್ (ಕೆಇಬಿ) ಸರ್ವೆ ಕಾರ್ಯ ಆರಂಭಗೊಂಡಿದ್ದು, ಬಾಡಿಗೆ ಮನೆಯಲ್ಲಿ ವಾಸಿಸುವವರು ಕೈಬರಹದ ಬಾಡಿಗೆ ಪತ್ರ ಹಾಗೂ ಆಧಾರ್ ಕಾರ್ಡ್ ಸಲ್ಲಿಸಿ ಗೃಹಜ್ಯೋತಿ ಯೋಜನೆಯ ಸೌಲಭ್ಯ ಪಡೆಯಬಹುದು ಎಂದು ತಿಳಿಸಿದರು. ಲೈನ್‌ಮನ್‌ಗಳು ಸುರಕ್ಷತಾ ಕಿಟ್ ಧರಿಸಿ ಕರ್ತವ್ಯ ನಿರ್ವಹಿಸಬೇಕು ಎಂದರು.

ಯುವನಿಧಿ ಯೋಜನೆಯಡಿ ನಿರುದ್ಯೋಗಿ ಯುವಕರು ಮತ್ತು ಯುವತಿಯರಿಗೆ ಹೆಚ್ಚಿನ ಪ್ರಮಾಣದಲ್ಲಿ ತರಬೇತಿ ಕಲ್ಪಿಸಲು ಕ್ರಮ ಕೈಗೊಳ್ಳಬೇಕು. ಕೋಚಿಂಗ್ ಕೇಂದ್ರಗಳಿಗೆ ಭೇಟಿ ನೀಡಿ ಯೋಜನೆ ಕುರಿತು ಮಾಹಿತಿ ನೀಡಬೇಕು. ಗ್ರಾಮ ಮಟ್ಟದಲ್ಲಿ ಸಭೆಗಳು, ಜಾಗೃತಿ ಕಾರ್ಯಕ್ರಮಗಳು ಹಾಗೂ ಮಾಹಿತಿ ಶಿಬಿರಗಳನ್ನು ಆಯೋಜಿಸಿ ಅರ್ಹ ಯುವಕರಿಗೆ ಯೋಜನೆಯ ಪ್ರಯೋಜನಗಳು, ಅರ್ಜಿ ಸಲ್ಲಿಸುವ ವಿಧಾನ ಹಾಗೂ ಅರ್ಹತೆ ಕುರಿತು ಸಂಪೂರ್ಣ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಗೃಹಲಕ್ಷ್ಮಿ ಯೋಜನೆಯ ಮಾಹಿತಿಯನ್ನು ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪಿಸಬೇಕು. ಮರಣ ಹೊಂದಿದ ಫಲಾನುಭವಿಗಳ ವಿವರಗಳನ್ನು ಅಂಗನವಾಡಿ ಕಾರ್ಯಕರ್ತೆಯರು ಪರಿಶೀಲಿಸಿ ಸಂಬಂಧಿತ ಅಧಿಕಾರಿಗಳಿಗೆ ಸಲ್ಲಿಸಬೇಕು. ಬಸ್ ನಿಲ್ದಾಣಗಳ ಶೌಚಾಲಯಗಳ ಸ್ವಚ್ಛತೆ ಪರಿಶೀಲಿಸಿ, ಅಸ್ವಚ್ಛತೆ ಕಂಡುಬಂದರೆ ಸಂಬಂಧಪಟ್ಟ ಸಿಬ್ಬಂದಿಗೆ ದಂಡ ವಿಧಿಸುವಂತೆ ಸೂಚಿಸಿದರು.

ಸರ್ಕಾರದ ನಿರ್ದೇಶನದಂತೆ ಎಲ್ಲ ಅನ್ನಭಾಗ್ಯ ನ್ಯಾಯಬೆಲೆ ಅಂಗಡಿಗಳಲ್ಲಿ ಮುಖ್ಯಮಂತ್ರಿ ಹಾಗೂ ಆಹಾರ ಸಚಿವರ ಭಾವಚಿತ್ರ, ಧಾನ್ಯಗಳ ದರಪಟ್ಟಿ, ಲಭ್ಯವಿರುವ ದಾಸ್ತಾನು ಮತ್ತು ವಿತರಣಾ ದಿನಾಂಕವನ್ನು ಸಾರ್ವಜನಿಕರಿಗೆ ಸ್ಪಷ್ಟವಾಗಿ ಪ್ರದರ್ಶಿಸಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಗೃಹಲಕ್ಷ್ಮಿ ಯೋಜನೆಯ ಮರಣ ಹೊಂದಿದ ಫಲಾನುಭವಿಗಳ ಖಾತೆಗೆ ಜಮೆಯಾಗಿರುವ ಹಣವನ್ನು ಸರ್ಕಾರಕ್ಕೆ ಮರಳಿ ವಸೂಲಿ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ಮರಣ ಹೊಂದಿದ ಫಲಾನುಭವಿಗಳ ಖಾತೆಯಿಂದ ಕುಟುಂಬದವರು ಎಟಿಎಂ ಮೂಲಕ ಹಣ ಪಡೆದಿದ್ದರೆ ಅದನ್ನು ಸರ್ಕಾರಕ್ಕೆ ಮರಳಿಸಬೇಕು. ಹಣ ಮರುಪಾವತಿಸದಿದ್ದರೆ ಮುಂದಿನ ಸರ್ಕಾರಿ ಸೌಲಭ್ಯಗಳನ್ನು ಸ್ಥಗಿತಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮುರಗಯ್ಯಾ ವಿರಕ್ತಮಠ, ಶಾಂತಪ್ಪ ಎಸ್. ಅಕ್ಕಿ, ರೇಹಾನ್ ರಝಾ ಐನಾಪೂರಿ, ರತ್ನಾ ತೇಗೂರಮಠ, ಸುಧೀರ ಎಸ್. ಬೋಳಾರ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊಗಲಬಾವಿ, ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ವಿನಾಯಕ ಕುರುಬರ, ಬಸಪ್ಪ ಮಹಾಬಲೇಶ್ವರ ಬಾವಕಾರ, ಮಂಜುನಾಥ ಮಾಯಣ್ಣವರ, ವರ್ಧಮಾನ ಹಿರೇಗೌಡರ ಹಾಗೂ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ

ಯುವನಿಧಿ ಯೋಜನೆಯಡಿ 12,448 ಅರ್ಜಿಗಳು ಸ್ವೀಕೃತವಾಗಿದ್ದು, 10,350 ಫಲಾನುಭವಿಗಳಿಗೆ ಡಿಬಿಟಿ ಮೂಲಕ ರೂ.32,08,57,000 ಸಹಾಯಧನ ಜಮೆಯಾಗಿದೆ. ಶಕ್ತಿ ಯೋಜನೆ ಆರಂಭವಾದ ಬಳಿಕ ಇದುವರೆಗೆ 41,13,76,389 ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದು, ಸರ್ಕಾರ ರೂ.907.77 ಕೋಟಿ ಬಿಡುಗಡೆ ಮಾಡಿದೆ. ಗೃಹಜ್ಯೋತಿ ಯೋಜನೆಯಡಿ 5,08,244 ಫಲಾನುಭವಿಗಳಿಗೆ ರೂ.778.56 ಕೋಟಿ, ಗೃಹಲಕ್ಷ್ಮಿ ಯೋಜನೆಯಡಿ 3,77,912 ಫಲಾನುಭವಿಗಳಿಗೆ ರೂ.2,194.80 ಕೋಟಿ ಹಾಗೂ ಅನ್ನಭಾಗ್ಯ ಯೋಜನೆಯಡಿ 3,75,996 ಫಲಾನುಭವಿಗಳಿಗೆ ರೂ.362.51 ಕೋಟಿ ಬಿಡುಗಡೆ ಮಾಡಲಾಗಿದೆ.

**ಮೊದಲನೆಯ ಪುಟದ್ದು**

## ಬರದ ಬೆನ್ನಲ್ಲೇ ಮೋಡ ಬಿತ್ತನೆಗೆ.....

ಜಿಲ್ಲೆಯಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗಿರುವುದರಿಂದ ಮೂರು ದಿನಗಳ ಕಾಲ ಮೋಡ ಬಿತ್ತನೆ ನಡೆಸಲಾಗುತ್ತಿದೆ. ಜುಲೈ ತಿಂಗಳ ಪೂರ್ತಿ ಮೋಡ ಬಿತ್ತನೆ ವಿಮಾನ ಹುಬ್ಬಳ್ಳಿಯಲ್ಲೇ ಇರಲಿದ್ದು, ವಿಜ್ಞಾನಿಗಳ ಸಲಹೆಯಂತೆ ಮುಂದಿನ ಕಾರ್ಯಾಚರಣೆ ಕೈಗೊಳ್ಳಲಾಗುವುದು. ಒಂದು ಗಂಟೆ ಮೋಡ ಬಿತ್ತನೆಗೆ ಸುಮಾರು ರೂ. 15 ಲಕ್ಷ ವೆಚ್ಚವಾಗಲಿದ್ದು, ಇದರಿಂದ ರೈತರ ಬೆಳೆಗಳಿಗೆ ಅನುಕೂಲವಾಗಲಿದೆ ಎಂದರು.

ಶಾಸಕ ಎಚ್.ಕೆ. ಪಾಟೀಲ ಮಾತನಾಡಿ, ಬರ ಪರಿಸ್ಥಿತಿಯಿಂದ ರೈತರು ಸಂಕಷ್ಟದಲ್ಲಿರುವುದನ್ನು ಮನಗಂಡು ವೈಜ್ಞಾನಿಕ ತಂತ್ರಜ್ಞಾನದ ಮೂಲಕ ಮೋಡ ಬಿತ್ತನೆಗೆ ಚಾಲನೆ ನೀಡಲಾಗಿದೆ. ಈ ಪ್ರಯತ್ನ ಯಶಸ್ವಿಯಾಗಿ ರೈತರ ಸಂಕಷ್ಟ ನಿವಾರಣೆಯಾಗುವ ವಿಶ್ವಾಸವಿದೆ. 2001 ಹಾಗೂ 2017ರಲ್ಲೂ ಮೋಡ ಬಿತ್ತನೆ ಯಶಸ್ವಿಯಾಗಿತ್ತು ಎಂದು ನೆನಪಿಸಿದರು.

ಶಾಸಕ ಎನ್.ಎಚ್. ಕೋನರಡ್ಡಿ ಮಾತನಾಡಿ, ಹಾವೇರಿಯಲ್ಲಿ ಮೋಡ ಬಿತ್ತನೆ ಮಾಡಿದ ಪರಿಣಾಮ ಧಾರವಾಡ ಜಿಲ್ಲೆಗೂ ಮಳೆಯಾಗುವ ನಿರೀಕ್ಷೆಯಿದೆ. ಮುಂದಿನ ದಿನಗಳಲ್ಲಿ ಧಾರವಾಡ ಜಿಲ್ಲೆಯಲ್ಲೂ ಮೋಡ ಬಿತ್ತನೆ ನಡೆಸುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಲಾಗುವುದು. ಹೆಸರು ಬೆಳೆ ಈಗಾಗಲೇ ಹಾನಿಗೊಳಗಾಗಿದ್ದು, ಮೋಡ ಬಿತ್ತನೆಯಿಂದ ಹತ್ತಿ, ಶೇಂಗಾ ಹಾಗೂ ಕಬ್ಬು ಬೆಳೆಗಳಿಗೆ ಅನುಕೂಲವಾಗಲಿದೆ ಎಂದರು.

ಈ ಸಂದರ್ಭದಲ್ಲಿ ಶಾಸಕರಾದ ರುದ್ರಪ್ಪ ಲಮಾಣಿ, ಯಾಸೀರ್ ಖಾನ್ ಪಠಾಣ, ಎಫ್.ಎಚ್. ಜಕ್ಕಪ್ಪನವರ, ಹುಬ್ಬಳ್ಳಿ–ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರೂ. 28 ಕೋಟಿ ಬೆಳೆವಿಮೆ.....

ನಡೆದ ಸಭೆಯಲ್ಲಿ ಕೆಂಪು ಮೆಣಸಿನಕಾಯಿ ಬೆಳೆಗಾರರಿಗೆ ಪರಿಹಾರ ನೀಡುವ ಕುರಿತು ಚರ್ಚೆ ನಡೆದಿತ್ತು. ಸಭೆಯ ಬಳಿಕ ಕಂಪನಿ ನೀಡಿದ ಪ್ರತಿಕ್ರಿಯೆಯಲ್ಲಿ, ರೈತ ಸಂಘಗಳ ಮನವಿ ಹಾಗೂ ಬೆಳೆ ಸಮೀಕ್ಷೆ ವರದಿಯ ಆಧಾರದ ಮೇಲೆ ರಾಜ್ಯ ಸರ್ಕಾರದಿಂದ ಅಗತ್ಯ ಅನುದಾನ ದೊರೆತಲ್ಲಿ ಸರ್ಕಾರದ ಆದೇಶದಂತೆ ಕ್ರಮ ಕೈಗೊಳ್ಳುವುದಾಗಿ ತಿಳಿಸಿತ್ತು ಎಂದು ಹೇಳಿದರು.

ರೈತರಿಗೆ ನೀಡಬೇಕಿರುವ ಸುಮಾರು ರೂ. 28 ಕೋಟಿ ಬೆಳೆವಿಮೆ ಪರಿಹಾರವನ್ನು ವಿನಾಕಾರಣ ವಿಳಂಬ ಮಾಡಲಾಗುತ್ತಿದೆ. ಸರ್ಕಾರ ಮತ್ತು ವಿಮಾ ಕಂಪನಿ ಪರಸ್ಪರ ಹೊಣೆಗಾರಿಕೆಯನ್ನು ತಳ್ಳಿಹಾಕುತ್ತಿದ್ದು, ಅದರ ಹೊರೆ ರೈತರ ಮೇಲೆ ಬೀಳುತ್ತಿದೆ. ತಕ್ಷಣವೇ ಬಾಕಿ ಹಣ ಬಿಡುಗಡೆ ಮಾಡಿ ರೈತರಿಗೆ ನ್ಯಾಯ ಒದಗಿಸಬೇಕು.

**–ಯಲ್ಲಪ್ಪಗೌಡ ಕರಮುಡಿ, ಜಿಲ್ಲಾಧ್ಯಕ್ಷರು, ಅಖಿಲ ಕರ್ನಾಟಕ ರಾಜ್ಯ ಕಿಸಾನ ಜಾಗೃತಿ ಸಂಘ**

ಜಿಲ್ಲೆಯ ಸಾವಿರಾರು ರೈತರು ಬೆಳೆ ನಷ್ಟದಿಂದ ತೀವ್ರ ಆರ್ಥಿಕ ಸಂಕಷ್ಟದಲ್ಲಿದ್ದು, ಬಾಕಿ ಉಳಿದಿರುವ ಬೆಳೆವಿಮೆ ಪರಿಹಾರವನ್ನು ಕೂಡಲೇ ಬಿಡುಗಡೆ ಮಾಡಬೇಕು. ಜೊತೆಗೆ ರೈತರಿಗೆ ಅನ್ಯಾಯ ಎಸಗಿರುವ ಅಧಿಕಾರಿಗಳು ಹಾಗೂ ಓರಿಯಂಟಲ್ ಇನ್ಶುರೆನ್ಸ್ ಕಂಪನಿ ವಿರುದ್ಧ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಯಲ್ಲಪ್ಪಗೌಡ ಕರಮುಡಿ ಆಗ್ರಹಿಸಿದರು.

## ರೂ. 28 ಕೋಟಿ ಬೆಳೆವಿಮೆ.....

ಬೆಲೆ ಪಡೆಯುವ ಉದ್ದೇಶದಿಂದ ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘಗಳು ಸ್ಥಾಪನೆಯಾಗಿವೆ. ಎಪಿಎಂಸಿ ಹಾಗೂ ಸಹಕಾರಿ ಸಂಸ್ಥೆಗಳು ರೈತರ ಬೆನ್ನೆಲುಬಾಗಿ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಇಂದು ರಾಜ್ಯದ ಅನೇಕ ಸಹಕಾರಿ ಸಂಸ್ಥೆಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ. ಖರೀದಿದಾರರಿಂದ ರೈತರಿಗೆ ಸಕಾಲದಲ್ಲಿ ಹಣ ಪಾವತಿಯಾಗದಿರುವುದು ಇದಕ್ಕೆ ಪ್ರಮುಖ ಕಾರಣವಾಗಿದೆ. ಆದರೂ ಗದಗ ಜಿಲ್ಲೆ ಸಹಕಾರಿ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದ್ದು, ರೈತರ ಹಿತಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿದೆ. ಶಿರಹಟ್ಟಿ ಟಿಎಪಿಸಿಎಂಎಸ್ ಸಂಸ್ಥೆಯ ಪುನಶ್ಚೇತನ ಶ್ಲಾಘನೀಯ ಬೆಳವಣಿಗೆಯಾಗಿದೆ ಎಂದರು.

ತಾವು ಗೃಹ ಸಚಿವರಾಗಿದ್ದ ವೇಳೆ ಈ ಸಂಸ್ಥೆಯ ಪುನಶ್ಚೇತನಕ್ಕೆ ಮನವಿ ಬಂದ ತಕ್ಷಣವೇ ಅಗತ್ಯ ಕ್ರಮ ಕೈಗೊಳ್ಳಲಾಗಿತ್ತು. ಬಳಿಕ ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಅವರ ಸಹಕಾರದಿಂದ ಷೇರು ಬಂಡವಾಳ ಸಂಗ್ರಹಿಸಿ, ಮಾರ್ಕೆಟಿಂಗ್ ಫೆಡರೇಶನ್ ನೆರವಿನೊಂದಿಗೆ ಸಾಲ ಸೌಲಭ್ಯ ಕಲ್ಪಿಸಲಾಗಿದೆ. ಮುಂದೆಯೂ ಸಂಸ್ಥೆಗೆ ಅಗತ್ಯ ಬಂಡವಾಳ ಹಾಗೂ ಶೇ.1ರ ಬಡ್ಡಿದರದಲ್ಲಿ ಸಾಲ ಸೌಲಭ್ಯ ಒದಗಿಸಲು ತಾವು ಸಿದ್ಧವಿದ್ದು, ಸಂಸ್ಥೆ ಲಾಭದಾಯಕವಾಗಿ ಬೆಳೆಯಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಪ್ರೊ. ಎಸ್.ವಿ. ಸಂಕನೂರ, ಶಾಸಕ ಡಾ. ಚಂದ್ರು ಲಮಾಣಿ, ಜಿಪಂ ಮಾಜಿ ಸದಸ್ಯ ಎಂ.ಎಸ್. ದೊಡ್ಡಗೌಡ ಮಾತನಾಡಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಜ.ಫ. ಸಿದ್ದರಾಮ ಸ್ವಾಮೀಜಿ ವಹಿಸಿದ್ದರು.

ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಟಿಎಪಿಸಿಎಂಎಸ್ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಜಿಪಂ ಮಾಜಿ ಸದಸ್ಯ ಶಿವಪ್ರಕಾಶ ಮಹಾಜನಶೆಟ್ಟರ, ಸಿ.ಸಿ. ನೂರಶೆಟ್ಟರ, ಎಲ್.ಡಿ. ಪಾಟೀಲ, ಜಿ.ವಿ. ಪಾಟೀಲ, ಸಂದೀಪ ಕಪ್ಪತ್ತನವರ, ನಾಗರಾಜ ಲಕ್ಕುಂಡಿ, ಸಂದೇಶ ಗಾಣಿಗೇರ, ಫಕ್ಕೀರೇಶ ರಟ್ಟಿಹಳ್ಳಿ, ವಸಂತ ಜಗ್ಗಲರ, ಸುರೇಶ ಕಪ್ಪತ್ತನವರ, ಸುಮಾ ಶಿವಪ್ರಕಾಶ ಮಹಾಜನಶೆಟ್ಟರ, ಬಸವರಾಜ ತುಳಿ, ರಾಜು ಪಾಟೀಲ, ಮಹೇಶ ಮತ್ತೂರ, ಪಿಎಸ್‌ಐ ಈರಪ್ಪ ರಿತ್ತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು

## ಸಂಗೀತ–ಪ್ರವಚನ ಕ್ಷೇತ್ರದ ಸಾಧಕರಿಗೆ 'ಕುಮಾರಶ್ರೀ' ಪ್ರಶಸ್ತಿ ಪ್ರದಾನ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಲಿಂ.ಪಂಡಿತ ಪಂಚಾಕ್ಷರಿ ಗವಾಯಿಗಳ 82ನೇ ಹಾಗೂ ಲಿಂ.ಡಾ. ಪಂಡಿತ ಪುಟ್ಟರಾಜ ಕವಿ ಗವಾಯಿಗಳ 16ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಕ್ಷೇತ್ರಗಳ ಸಾಧಕರಿಗೆ 'ಕುಮಾರಶ್ರೀ' ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು. ಚೆನ್ನೈನ ಶಹನಾಯಿ ವಾದಕರಾದ ಪದ್ಮಶ್ರೀ ಪಂಡಿತ ಡಾ.ಎಸ್. ಬಾಳೇಶ ಭಜಂತ್ರಿ, ಪ್ರವಚನ ಕ್ಷೇತ್ರದಲ್ಲಿ ವಿಶಿಷ್ಟ ಸಾಧನೆ ಮಾಡಿದ ಡೋಣಿಯ ಶಶಿಧರ ಶಾಸ್ತ್ರಿ ಹಿರೇಮಠ ಹಾಗೂ ತಬಲಾ ವಾದಕರಾದ ಹೊನ್ನಿಗನೂರಿನ ಬಸವರಾಜ ಅಮರಗೋಳ ಅವರಿಗೆ ಕುಮಾರಶ್ರೀ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದುಗಿನ ತೋಂಟ–ದಾರ್ಯ ಡಾ.ಸಿದ್ದರಾಮ ಮಹಾಸ್ವಾಮಿಗಳು, ಗುಳೇದಗುಡ್ಡ ಮುರುಘಾಮಠದ ಕಾಶೀನಾಥ ಮಹಾಸ್ವಾಮಿಗಳು, ಅಡ್ನೂರ ಬ್ರಹನ್ಮಠದ ಅಭಿನವ ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು, ಮೈಸೂರು ಕುಂದೂರು ಮಠದ ಡಾ. ಶರತ್‌ಚಂದ್ರ ಸ್ವಾಮಿಗಳು, ಮೈಸೂರು ಅರಮನೆ ಪಂಚಗವಿಮಠದ ಶ್ರೀಕಂಠ ಸ್ವಾಮಿಗಳು, ಅಂತೂರು□ಬೆಂತೂರಿನ ಕುಮಾರ ದೇವರು, ಅಡವೀಂದ್ರಮಠದ ಮಹೇಶ್ವರ ಸ್ವಾಮೀಜಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ವೀರೇಶ್ವರ ಪುಣ್ಯಾಶ್ರಮದ ಸೋಲ್ ಟ್ರಸ್ಟ್ ಅಧ್ಯಕ್ಷ ನಿಂಗಪ್ಪ ಕೆಂಗಾರ, ಸದಸ್ಯ ಪರಶುರಾಮ ಕಟ್ಟಿಮನಿ, ಸಾರಿಗೆ ಇಲಾಖೆಯ ಅಧಿಕಾರಿಗಳಾದ ವಿಶಾಲ ಪವಾರ, ಅರುಣ ಕಟ್ಟಿಮನಿ, ಮಂಜುನಾಥ ಎಸ್.ಪಿ., ಧಾರವಾಡದ ರಮೇಶ ಬಸ್ಮಿ, ಮುರಳೀಧರ ದೇಶಪಾಂಡೆ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

## ಜಿಲ್ಲಾ ಲೆಕ್ಕಪರಿಶೋಧನೆ ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆಯ ಗದಗ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಸರ್ವಾನುಮತದಿಂದ ನಡೆಯಿತು.

ಸಭೆಯಲ್ಲಿ ಸ್ಥಳೀಯ ಲೆಕ್ಕಪರಿಶೋಧನ ವರ್ತುಲದ ಲೆಕ್ಕಪರಿಶೋಧನಾಧಿಕಾರಿ ಎಂ.ಜಿ. ದೊಡ್ಡಮನಿ ಅವರನ್ನು ಜಿಲ್ಲಾ ಘಟಕದ ಅಧ್ಯಕ್ಷರಾಗಿ, ಜಿಲ್ಲಾ ಪಂಚಾಯತ್ ಲೆಕ್ಕಾಧೀಕ್ಷಕ ಮಲ್ಲಿಕಾರ್ಜುನ ಹೊಸೂರು ಅವರನ್ನು ಉಪಾಧ್ಯಕ್ಷರಾಗಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಲೆಕ್ಕಾಧೀಕ್ಷಕ ಅರಿಹಂತ ದುಂಡಣ್ಣವರ ಅವರನ್ನು ಕಾರ್ಯದರ್ಶಿಯಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದ ಅಧಿಕಾರಿಗಳು, ಇಲಾಖೆಯ ಅಭಿವೃದ್ಧಿ, ಸಿಬ್ಬಂದಿಯ ಹಿತಾಸಕ್ತಿ ಹಾಗೂ ಸಮನ್ವಯದೊಂದಿಗೆ ಸಂಘಟನೆಯನ್ನು ಇನ್ನಷ್ಟು ಬಲಪಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವಂತೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ಪ್ರಶಾಂತ್, ಸ್ಥಳೀಯ ಲೆಕ್ಕಪರಿಶೋಧನ ವರ್ತುಲದ ಹಿರಿಯ ಉಪ ನಿರ್ದೇಶಕಿ ಶಾಂತಾ ಜಾಧವ, ಲೆಕ್ಕಪರಿಶೋಧನಾಧಿಕಾರಿಗಳಾದ ಗುರುರಾಜ್ ಚವ್ಹಾಣ, ಟಿ.ಎಂ. ಕಂಠಿ, ಪ್ರಕಾಶ್ ಮುದ್ಗಲ್ ಸೇರಿದಂತೆ ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಸಭೆಯ ನಂತರ ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಇಲಾಖೆಯ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

## ನೂತನ ಬಿಇಒ ದಯಾನಂದ ಯಾವಗಲ್ಲಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ತಾಲೂಕಿನ ನೂತನ ಕ್ಷೇತ್ರ ಶಿಕ್ಷಣಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡ ದಯಾನಂದ ಯಾವಗಲ್ಲ ಅವರನ್ನು ಅಖಿಲ ಕರ್ನಾಟಕ ಶಾಲಾ–ಕಾಲೇಜುಗಳ ಅನುದಾನಿತ ನೌಕರರ ಸಂಘದ ರೋಣ ತಾಲೂಕು ಘಟಕದ ವತಿಯಿಂದ ಗೌರವಪೂರ್ವಕವಾಗಿ ಸನ್ಮಾನಿಸಿ ಅಭಿನಂದಿಸಲಾಯಿತು. ಈ ಸಂದರ್ಭದಲ್ಲಿ ಸಂಘದ ತಾಲೂಕು ಅಧ್ಯಕ್ಷ ಬಿ.ಬಿ. ಮೇಗಲಮನಿ, ಕಾರ್ಯದರ್ಶಿ ಎಸ್.ಕೆ.ಆಡಿನ, ಖಜಾಂಚಿ ಕೆ.ಎಸ್. ಹಳ್ಳಳ್ಳಿ ಸೇರಿದಂತೆ ಸದಸ್ಯರಾದ ಎಸ್. ಎನ್. ಭರಮಗೌಡ್ರ, ಎಸ್.ಟಿ. ವಾಲ್ಮೀಕಿ, ಎಂ.ಎಸ್. ವಾಲ್ಮೀಕಿ, ಪಿ.ಪಿ.ವಾಲ್ಮೀಕಿ, ಎಂ.ಎಸ್. ಹೊಸಮನಿ, ಎಂ.ಕೆ. ಬಂಡಗರ್ ಹಾಗೂ ಪಿ.ಎಂ. ಮುನವಳ್ಳಿ ಉಪಸ್ಥಿತರಿದ್ದು, ನೂತನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಶುಭ ಹಾರೈಸಿದರು.

## ಶಿಖರ ಗೆದ್ದ ಸೃಷ್ಟಿಗೆ ಗೌರವ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಉತ್ತರಾಖಂಡದ ಉತ್ತರಕಾಶಿ ಜಿಲ್ಲೆಯ ಸುಮಾರು 15,500 ಅಡಿ ಎತ್ತರದ 'ಹುರ್ರಾ ಟಾಪ್' ಶಿಖರವನ್ನು ಯಶಸ್ವಿಯಾಗಿ ಏರಿದ ಜಕ್ಕಲಿ ಗ್ರಾಮದ ಯುವ ಪರ್ವತಾರೋಹಿ ಸೃಷ್ಟಿ ಉಮೇಶ ಮೇಟಿ ಅವರನ್ನು ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಮಿಥುನ ಪಾಟೀಲ ಹಾಗೂ

ಈ ಸಂದರ್ಭದಲ್ಲಿ ಮಾತನಾಡಿದ ಮಿಥುನ ಪಾಟೀಲ, ಸೃಷ್ಟಿ ಅವರ ಸಾಧನೆ ಗ್ರಾಮೀಣ ಪ್ರತಿಭೆಗಳಿಗೆ ಸ್ಫೂರ್ತಿಯಾಗಿದ್ದು, ರಾಷ್ಟ್ರಮಟ್ಟದಲ್ಲಿ ಜಕ್ಕಲಿ ಗ್ರಾಮದ ಕೀರ್ತಿ ಹೆಚ್ಚಿಸಿದೆ ಎಂದು ಹೇಳಿದರು.ಶಶಿಕಲಾ ಪಾಟೀಲ, ಹೆಣ್ಣುಮಕ್ಕಳಿಗೆ ಸೂಕ್ತ ಅವಕಾಶ ಸಿಕ್ಕರೆ ಯಾವುದೇ ಕ್ಷೇತ್ರದಲ್ಲೂ ಸಾಧನೆ ಮಾಡಬಹುದು ಎಂಬುದನ್ನು ಸೃಷ್ಟಿ ತೋರಿಸಿಕೊಟ್ಟಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ, ನಿವೃತ್ತ ಪ್ರಾಂಶುಪಾಲ ಎಂ.ಎಸ್. ಕೋರಿ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಸಿ ನೆಟ್ಟು ಪರಿಸರ ಕಾಳಜಿಗೆ ರೋಟರಿ ಸಂದೇಶ




ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯಕರ ಜೀವನಕ್ಕೆ ಶುದ್ಧ ಪರಿಸರವೇ ಮೂಲಾಧಾರವಾಗಿದ್ದು, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.ಮಕ್ಕಳಲ್ಲಿ ಬಾಲ್ಯದಿಂದಲೇ ಪರಿಸರ ಪ್ರಜ್ಞೆ ಬೆಳೆಸಿದರೆ ಹಸಿರು ಸಮಾಜ ನಿರ್ಮಾಣ ಸಾಧ್ಯ ಎಂದು ಗದಗ-ಬೆಟಗೇರಿ ರೋಟರಿ ಕ್ಲಬ್ ಅಧ್ಯಕ್ಷ ಡಾ.ಪ್ರದೀಪ ಉಗಲಾಟ ಹೇಳಿದರು.

ನಗರದ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.10ರಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಗದಗ-ಬೆಟಗೇರಿ ರೋಟರಿ ಕ್ಲಬ್ ವತಿಯಿಂದ ಆಯೋಜಿಸಿದ್ದ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

"ಪರಿಸರವನ್ನು ಉಳಿಸೋಣ  ಭವಿಷ್ಯವನ್ನು ಬೆಳೆಸೋಣ" ಎಂಬ ಸಂದೇಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.ಶುದ್ಧ ಗಾಳಿ, ಶುದ್ಧ ನೀರು ಹಾಗೂ ಪೌಷ್ಟಿಕ ಆಹಾರಕ್ಕಾಗಿ ಪರಿಸರ ಸಂರಕ್ಷಣೆ ಅತ್ಯಗತ್ಯವಾಗಿದೆ.ಶಾಲಾ ಹಂತದಲ್ಲಿಯೇ ಪರಿಸರದ ಮಹತ್ವದ ಕುರಿತು ಜಾಗೃತಿ ಮೂಡಿಸಿದರೆ ಪರಿಸರ ಸ್ನೇಹಿ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

> ಶುದ್ಧ ಪರಿಸರವೇ ಆರೋಗ್ಯಕರ ಬದುಕಿನ ಅಡಿಪಾಯ.ಪ್ರತಿಯೊಬ್ಬರೂ ಒಂದು ಸಸಿ ನೆಟ್ಟು ಅದರ ಪೋಷಣೆ ಮಾಡಿದರೆ ಮುಂದಿನ ಪೀಳಿಗೆಗೆ ಹಸಿರು ಭವಿಷ್ಯ ಕಟ್ಟಬಹುದು.
>
> **-ಡಾ. ಪ್ರದೀಪ ಉಗಲಾಟ, ಅಧ್ಯಕ್ಷರು, ಗದಗ-ಬೆಟಗೇರಿ ರೋಟರಿ ಕ್ಲಬ್**

ಶಾಲೆಯ ಮುಖ್ಯೋಪಾಧ್ಯಾಯಿನಿ ಬಾಳಿಹಳ್ಳಿಮಠ ಮಾತನಾಡಿ, ವಿವಿಧ ಸಂಘ-ಸಂಸ್ಥೆಗಳು ಶಾಲೆಗಳಲ್ಲಿ ಪರಿಸರ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ.ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಪರಿಸರದ ಬಗ್ಗೆ ಕಾಳಜಿ ಮತ್ತು ಹೊಣೆಗಾರಿಕೆ ಬೆಳೆಸುತ್ತವೆ ಎಂದು ಹೇಳಿದರು.

ಮುಖ್ಯೋಪಾಧ್ಯಾಯ ಬಿ.ಎಸ್. ಮೆಣಸಿನಕಾಯಿ ಸ್ವಾಗತಿಸಿದರು.ಕವಿತಾ ಬೇಲೇರಿ ಕಾರ್ಯಕ್ರಮ ನಿರೂಪಿಸಿದರು. ಎಫ್.ಎ.ನಮಾಜಿ ವಂದಿಸಿದರು.

ಈ ಸಂದರ್ಭದಲ್ಲಿ ರೋಟರಿ ಕ್ಲಬ್ ಕಾರ್ಯದರ್ಶಿ ಅಕ್ಷಯ್ ಶೆಟ್ಟಿ, ರೋಟರಿ ವೆಲ್‌ಫೇರ್ ಅಧ್ಯಕ್ಷ ಶ್ರೀಧರ ಸುಲ್ತಾನಪೂರ, ಎಸ್.ವಿ. ಕುಂಬಾರ, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

### ಪಂಚಾಕ್ಷರಿ-ಪುಟ್ಟರಾಜ ಗವಾಯಿಗಳ ಜಾತ್ರಾ ಮಹೋತ್ಸವದಲ್ಲಿ ತೋಂಟದ ಶ್ರೀಗಳ ನುಡಿ

# ಉಭಯ ಗುರುಗಳು ವೀರೇಶ್ವರ ಪುಣ್ಯಾಶ್ರಮದ ಕಲ್ಪವೃಕ್ಷಗಳು

ವಿಜಯಸಾಕ್ಷಿ ಸುದ್ದಿ, ಗದಗ

ಉಭಯ ಗುರುಗಳಾದ ಲಿಂ. ಪಂಡಿತ ಪಂಚಾಕ್ಷರಿ ಗವಾಯಿಗಳು ಹಾಗೂ ಲಿಂ. ಡಾ. ಪಂಡಿತ ಪುಟ್ಟರಾಜ ಗವಾಯಿಗಳು ಅಂಧ-ಅನಾಥರು, ಬಡವರ ಸೇವೆಗಾಗಿ ತಮ್ಮ ಬದುಕನ್ನೇ ಮುಡಿಪಾಗಿಟ್ಟು ಜೀವನವನ್ನು ಸಾರ್ಥಕಗೊಳಿಸಿದ ಮಹಾಪುರುಷರು. ವೀರೇಶ್ವರ ಪುಣ್ಯಾಶ್ರಮಕ್ಕೆ ಅವರು ಕಲ್ಪವೃಕ್ಷಗಳಾಗಿದ್ದು, ಅಂತಹ ಮಹಾತ್ಮರನ್ನು ಸಮಾಜ ಸದಾ ಸ್ಮರಿಸುತ್ತದೆ ಎಂದು ಗದುಗಿನ ತೋಂಟದಾರ್ಯ ಶ್ರೀಮಠದ ಜಗದ್ಗುರು ಡಾ. ಸಿದ್ದರಾಮ ಮಹಾಸ್ವಾಮಿಗಳು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂಚಾಕ್ಷರಿ ಗವಾಯಿಗಳ 82ನೇ ಹಾಗೂ ಪಂ. ಪುಟ್ಟರಾಜ ಗವಾಯಿಗಳ 16ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ನಡೆದ ಶಿವಾನುಭವ ಗೋಷ್ಠಿಯಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಹಾನಗಲ್ ಕುಮಾರೇಶ್ವರ ಶಿವಯೋಗಿಗಳ ದಿವ್ಯ ಚೈತನ್ಯದಿಂದ ಪಂಚಾಕ್ಷರಿ ಗವಾಯಿಗಳು ಗಾನಯೋಗಿಗಳಾಗಿ ರೂಪುಗೊಂಡರು. ಗುರುಗಳ ಮಾರ್ಗದರ್ಶನದಲ್ಲಿ ನಡೆದ ಪುಟ್ಟರಾಜ ಗವಾಯಿಗಳು ಅಂಧ-ಅನಾಥರ ಆಶಾಕಿರಣವಾಗಿ ಸಂಗೀತದ ಮೂಲಕ ಸಾವಿರಾರು ಬದುಕುಗಳನ್ನು ಕಟ್ಟಿಕೊಟ್ಟರು. ದೇಶದ ಅನೇಕ ಕಡೆ ಜಾತ್ರೆಗಳು ನಡೆಯುತ್ತವೆ. ಆದರೆ ಸಂಗೀತದ ಜಾತ್ರೆ ನಡೆಯುವುದು ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲೇ ಎಂಬ ಹೆಗ್ಗಳಿಕೆ ಈ ಕ್ಷೇತ್ರಕ್ಕಿದೆ ಎಂದು ಹೇಳಿದರು.



> ದೇಶದ ಅನೇಕ ಕಡೆ ಜಾತ್ರೆಗಳು ನಡೆಯುತ್ತವೆ. ಆದರೆ ಸಂಗೀತದ ಜಾತ್ರೆ ನಡೆಯುವುದು ಗದುಗಿನ ವೀರೇಶ್ವರ ಪುಣ್ಯಾಶ್ರಮದಲ್ಲೇ. ಉಭಯ ಗುರುಗಳು ಈ ಪುಣ್ಯಕ್ಷೇತ್ರದ ಕಲ್ಪವೃಕ್ಷಗಳು.
>
> **-ಜಗದ್ಗುರು ಡಾ. ಸಿದ್ದರಾಮ ಮಹಾಸ್ವಾಮಿಗಳು, ತೋಂಟದಾರ್ಯ ಶ್ರೀಮಠ**

ಜಾತಿ-ಪಕ್ಷ ಭೇದವಿಲ್ಲದೆ ಎಲ್ಲರಿಗೂ ಆಶ್ರಯ ನೀಡಿರುವ ಈ ಪುಣ್ಯಮಠದ ಘನತೆಗೆ ಧಕ್ಕೆಯಾಗುವ ಯಾವುದೇ ಬೆಳವಣಿಗೆ ನಡೆಯಬಾರದು ಎಂದು ಶ್ರೀಗಳು ಕಿವಿಮಾತು ಹೇಳಿದರು.

**ಸ್ಮಾರಕ ಭವನ ಪೂರ್ಣಗೊಳಿಸಲು ನೆರವು: ಪ್ರಹ್ಲಾದ ಜೋಶಿ:** ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಮಾತನಾಡಿ, ವೀರೇಶ್ವರ ಪುಣ್ಯಾಶ್ರಮವು ಸಂಗೀತದ ಮೂಲಕ ಜಗತ್ತಿಗೆ ಮಾನವೀಯತೆಯ ಸಂದೇಶ ಸಾರಿದ ಪುಣ್ಯಕ್ಷೇತ್ರವಾಗಿದೆ. ಸ್ವತಃ ಅಂಧರಾಗಿದ್ದರೂ ಸಾವಿರಾರು ಅಂಧ ಮಕ್ಕಳ ಬದುಕಿಗೆ ಜ್ಞಾನದ ಬೆಳಕು ನೀಡಿದ ಉಭಯ ಗುರುಗಳ ಸೇವೆ ಅನನ್ಯವಾಗಿದೆ. ಗವಾಯಿಗಳ ಸ್ಮಾರಕ ಭವನದ ಕಾಮಗಾರಿ ಪೂರ್ಣಗೊಳ್ಳಲು ರಾಜ್ಯ ಹಾಗೂ ಕೇಂದ್ರ ಸರ್ಕಾರದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಭರವಸೆ ನೀಡಿದರು.

**ಮಾನವೀಯ ಮೌಲ್ಯಗಳ ಪ್ರತೀಕ ಉಭಯ ಗುರುಗಳು: ಬಸವರಾಜ ಬೊಮ್ಮಾಯಿ:** ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ-ಗದಗ ಸಂಸದ ಬಸವರಾಜ ಬೊಮ್ಮಾಯಿ ಮಾತನಾಡಿ, ಇಂದಿನ ವಸ್ತುಪ್ರಧಾನ ಸಮಾಜದಲ್ಲಿ ಮಾನವೀಯ ಮೌಲ್ಯಗಳು ಕ್ಷೀಣಿಸುತ್ತಿರುವ ಸಂದರ್ಭದಲ್ಲಿ ಉಭಯ ಗುರುಗಳು ಸಾತ್ವಿಕತೆ, ಸೇವೆ ಮತ್ತು ಸಾರ್ಥಕ ಬದುಕಿನ ಆದರ್ಶವನ್ನು ಸಮಾಜಕ್ಕೆ ನೀಡಿದ್ದಾರೆ. ಸಂಗೀತದ ಮೂಲಕ ಸಾವಿರಾರು ಅಂಧ ಹಾಗೂ ಅಸಹಾಯಕರಿಗೆ ಬದುಕು ಕಟ್ಟಿಕೊಟ್ಟ ಪುಟ್ಟರಾಜ ಗವಾಯಿಗಳ ಸೇವೆ ಇತಿಹಾಸದಲ್ಲಿ ಅಜರಾಮರವಾಗಿರುತ್ತದೆ ಎಂದರು. ಗವಾಯಿಗಳ ಸ್ಮಾರಕ ಭವನಕ್ಕಾಗಿ ಹಿಂದೆ ರೂ.5 ಕೋಟಿ ಮಂಜೂರು ಮಾಡಲಾಗಿತ್ತು. ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ. ರಾಜ್ಯ ಹಾಗೂ ಕೇಂದ್ರ ಸರ್ಕಾರದ ಮಟ್ಟದಲ್ಲಿ ಸಮನ್ವಯ ಸಾಧಿಸಿ ಕಾಮಗಾರಿ ಪೂರ್ಣಗೊಳಿಸಲು ಅಗತ್ಯ ನೆರವು ನೀಡುವುದಾಗಿ ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ 2026ನೇ ಸಾಲಿನ 'ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿ'ಯನ್ನು ಕೀರ್ತನ ಕ್ಷೇತ್ರದ ಸಾಧಕ ನೀಲಕಂಠ ಶಾಸ್ತ್ರಿಗಳು (ಕೂಸಗೂರು) ಅವರಿಗೆ ಪ್ರದಾನ ಮಾಡಲಾಯಿತು.

ಹಾಗೆಯೇ ಚೆನ್ನೈನ ಶಹನಾಯಿ ವಾದಕ ಪದ್ಮಶ್ರೀ ಪಂ. ಡಾ. ಎಸ್. ಬಾಳೇಶ ಭಜಂತ್ರಿ, ಪ್ರವಚನ ಕ್ಷೇತ್ರದ ಡೋಣಿಯ ಶಶಿಧರ ಶಾಸ್ತ್ರಿ ಹಿರೇಮಠ ಹಾಗೂ ತಬಲಾ ವಾದಕ ಹೊನ್ನಿಗನೂರಿನ ಬಸವರಾಜ ಅಮರಗೋಳ ಅವರಿಗೆ 'ಕುಮಾರಶ್ರೀ' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ 'ಗಾನಯೋಗಿ ಶಿವಯೋಗಿ ಶ್ರೀ ಪರಮಪಂಚಾಕ್ಷರ ಮಹಾಪುರಾಣ' ಹಾಗೂ 'ಶಿವಶರಣೆ ಹೇಮರೆಡ್ಡಿ ಮಲ್ಲಮ್ಮಾಂಬೆಯ ಪುರಾಣ' ಗ್ರಂಥಗಳು ಲೋಕಾರ್ಪಣೆಗೊಂಡವು.

ವೇದಿಕೆಯಲ್ಲಿ ಗುಳೇದಗುಡ್ಡ ಮುರುಘಾಮಠದ ಕಾಶೀನಾಥ ಮಹಾಸ್ವಾಮಿಗಳು, ಅಡ್ನೂರ ಬ್ರಹನ್ಮಠದ ಅಭಿನವ ಪಂಚಾಕ್ಷರಿ ಶಿವಾಚಾರ್ಯ ಮಹಾಸ್ವಾಮಿಗಳು, ಮೈಸೂರು ಕುಂದೂರು ಮಠದ ಡಾ. ಶರತ್‌ಚಂದ್ರ ಸ್ವಾಮಿಗಳು, ಮೈಸೂರು ಅರಮನೆ ಪಂಚಗವಿ ಮಠದ ಶ್ರೀಕಂಠ ಸ್ವಾಮಿಗಳು, ಅಂತೂರು-ಬೆಂತೂರಿನ ಕುಮಾರ ದೇವರು, ಅಡವೀಂದ್ರಮಠದ ಮಹೇಶ್ವರ ಸ್ವಾಮೀಜಿ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ವೀರೇಶ್ವರ ಪುಣ್ಯಾಶ್ರಮದ ಸೋಲ್ ಟ್ರಸ್ಟ್ ಅಧ್ಯಕ್ಷ ನಿಂಗಪ್ಪ ಕೆಂಗಾರ, ಪರಶುರಾಮ ಕಟ್ಟಿಮನಿ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

### ಗಜೇಂದ್ರಗಡದಲ್ಲಿ ಸ್ವಚ್ಛತಾ ಶ್ರಮದಾನಕ್ಕೆ ಚಾಲನೆ-ಜನರ ಸಹಭಾಗಿತ್ವವೇ ಯಶಸ್ಸಿನ ಗುಟ್ಟು ಎಂದ ಇಒ ಚಂದ್ರಶೇಖರ ಕಂದಕೂರು

# ಪೊರಕೆ ಹಿಡಿದು ಬಸ್ ನಿಲ್ದಾಣ ಸ್ವಚ್ಛಗೊಳಿಸಿದ ಅಧಿಕಾರಿಗಳು




ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಜಿಟಿಜಿಟಿ ಮಳೆಯ ನಡುವೆಯೇ ಗಜೇಂದ್ರಗಡ ಕೇಂದ್ರ ಬಸ್ ನಿಲ್ದಾಣದಲ್ಲಿ ಅಧಿಕಾರಿಗಳು, ಸಿಬ್ಬಂದಿ ಹಾಗೂ ಜನಪ್ರತಿನಿಧಿಗಳು ಪೊರಕೆ ಹಿಡಿದು ಸ್ವಚ್ಛತಾ ಶ್ರಮದಾನ ನಡೆಸುವ ಮೂಲಕ ಸಾರ್ವಜನಿಕರಲ್ಲಿ ಸ್ವಚ್ಛತೆಯ ಅರಿವು ಮೂಡಿಸಿದರು.

ತಾಲೂಕು ಪಂಚಾಯಿತಿ, ತಾಲೂಕು ಗ್ಯಾರಂಟಿ ಸಮಿತಿ, ಪುರಸಭೆ, ಕೆಎಸ್‌ಆರ್‌ಟಿಸಿ ಹಾಗೂ ತಾಲೂಕಿನ ಎಲ್ಲಾ ಗ್ರಾಮ ಪಂಚಾಯಿತಿಗಳ ಸಂಯುಕ್ತ ಆಶ್ರಯದಲ್ಲಿ ಬಸ್ ನಿಲ್ದಾಣ ಆವರಣದಲ್ಲಿ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಬೆಳಿಗ್ಗೆ 6.30ರಿಂದ 9 ಗಂಟೆಯವರೆಗೆ ಬಸ್ ನಿಲ್ದಾಣ, ಇಂದಿರಾ ಕ್ಯಾಂಟೀನ್, ಶೌಚಾಲಯ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛಗೊಳಿಸಿ ಕಸವನ್ನು ತೆರವುಗೊಳಿಸಲಾಯಿತು.ಬಳಿಕ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ ಬಸ್ ನಿಲ್ದಾಣದ ಆವರಣದಲ್ಲಿ ಸ್ಯಾನಿಟೈಸರ್ ಸಿಂಪಡಿಸಿದರು.

ಅಂಗಡಿ ಮಾಲೀಕರನ್ನು ಭೇಟಿ ಮಾಡಿದ ಅಧಿಕಾರಿಗಳು ಕಸವನ್ನು ಎಲ್ಲೆಂದರಲ್ಲಿ ಎಸೆಯದೆ ಒಂದು ಕಡೆ ಸಂಗ್ರಹಿಸಿ ಪುರಸಭೆ ವಾಹನಕ್ಕೆ ನೀಡುವಂತೆ ಮನವಿ ಮಾಡಿದರು.

ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಶರಣಪ್ಪ ಬೆಟಗೇರಿ ಮಾತನಾಡಿ, ಸ್ವಚ್ಛತೆ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದ್ದು, ಸಾರ್ವಜನಿಕ ಸ್ಥಳಗಳನ್ನು ಸ್ವಚ್ಛವಾಗಿಟ್ಟರೆ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ ಎಂದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರು ಮಾತನಾಡಿ, ವೈಯಕ್ತಿಕ ಸ್ವಚ್ಛತೆಯೊಂದಿಗೆ ಸಾರ್ವಜನಿಕ ಸ್ಥಳಗಳ ಸ್ವಚ್ಛತೆಗೂ ಆದ್ಯತೆ ನೀಡಬೇಕು. ಸರ್ಕಾರದ ಸ್ವಚ್ಛತಾ ಅಭಿಯಾನಗಳು ಯಶಸ್ವಿಯಾಗಲು ಸಾರ್ವಜನಿಕರ ಸಹಭಾಗಿತ್ವ ಅತ್ಯಗತ್ಯವಾಗಿದೆ.ಗ್ರಾಮ ಪಂಚಾಯಿತಿಗಳೊಂದಿಗೆ ಸಾರ್ವಜನಿಕರು ಕೈಜೋಡಿಸಿದರೆ ಸ್ವಚ್ಛ ಮತ್ತು ಸುಂದರ ಪರಿಸರ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಹಾಯಕ ನಿರ್ದೇಶಕ (ಪಂ.ರಾಜ್) ಬಸವರಾಜ ಬಡಿಗೇರ್, ಪುರಸಭೆ ಮುಖ್ಯಾಧಿಕಾರಿ ಬಸವರಾಜ ಬಳಗಾನೂರ, ಕೆಎಸ್‌ಆರ್‌ಟಿಸಿ ಘಟಕದ ವ್ಯವಸ್ಥಾಪಕ ಕೆ.ಎಸ್. ಜಿಗಳೂರು, ತಾಲೂಕು ಯೋಜನಾಧಿಕಾರಿ ಅರವಿಂದ ಬಂಡಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಭಾಗವಹಿಸಿದ್ದರು.

### ಬರಗಾಲ ಸಭೆಯಲ್ಲಿ ಶಾಸಕ ಡಾ.ಚಂದ್ರು ಲಮಾಣಿ ಖಡಕ್ ಸೂಚನೆ-ಸ್ವಚ್ಛತೆ, ಕಾಮಗಾರಿ, ಜೂಜಾಟದ ವಿರುದ್ಧವೂ ಗರಂ!

# ಬೆಳೆವಿಮೆ ಅಕ್ರಮಕ್ಕೆ ಶಾಸಕ ಗರಂ




ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಅಮಾಯಕ ರೈತರನ್ನು ದಾರಿ ತಪ್ಪಿಸಿ ಬೆಳೆ ವಿಮೆ ನೋಂದಣಿಯಲ್ಲಿ ನಡೆಯುತ್ತಿರುವ ಅಕ್ರಮಗಳನ್ನು ತಡೆಯಲು ಕೂಡಲೇ ಖಾಸಗಿ ಪಿಆರ್‌ಓಗಳನ್ನು (ಕಖಔ) ಬದಲಾವಣೆ ಮಾಡಬೇಕು ಎಂದು ಶಾಸಕ ಡಾ.ಚಂದ್ರು ಲಮಾಣಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ರವಿವಾರ ಶಿರಹಟ್ಟಿ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ಶಿರಹಟ್ಟಿ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ತಾಲೂಕು ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಬರಗಾಲ ಹಾಗೂ ವಿಪತ್ತು ನಿರ್ವಹಣಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬೆಳೆ ವಿಮೆಯಲ್ಲಿ ಮಧ್ಯವರ್ತಿಗಳು ಹಾಗೂ ಕೆಲವು ಪಿಆರ್‌ಓಗಳು ಸೇರಿಕೊಂಡು ಒಂದು ಬೆಳೆ ಬದಲಿಗೆ ಮತ್ತೊಂದು ಬೆಳೆ ದಾಖಲಿಸುವ ಮೂಲಕ ರೈತರಿಗೆ ಅನ್ಯಾಯ ಮಾಡುತ್ತಿದ್ದಾರೆ.ಈ ಕಾರಣದಿಂದ ರೈತರ ಮನೆ ಬಾಗಿಲಿಗೆ ಹೋಗಿ ಗಲಾಟೆ ಮಾಡುವ ಪ್ರಕರಣಗಳೂ ಹೆಚ್ಚುತ್ತಿವೆ. ಕೃಷಿ ಇಲಾಖೆ ಮತ್ತು ಗ್ರಾಮ ಆಡಳಿತ ಅಧಿಕಾರಿಗಳು ಬೆಳೆ ಸಮೀಕ್ಷೆಯನ್ನು ಅತ್ಯಂತ ನಿಖರವಾಗಿ ನಡೆಸಬೇಕು.ಗ್ರಾಮ ಪಂಚಾಯಿತಿ ಮಟ್ಟದ ಮಳೆಮಾಪನ ಕೇಂದ್ರಗಳಲ್ಲಿಯೂ ಕಾಟಾಚಾರದ ಮಾಹಿತಿ ದಾಖಲಿಸದೆ ವಾಸ್ತವ ಅಂಕಿ-ಅಂಶಗಳನ್ನು ದಾಖಲಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ಪಟ್ಟಣಗಳ ಸ್ವಚ್ಛತೆ ಕುರಿತು ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, ಲಕ್ಷ್ಮೇಶ್ವರದಲ್ಲಿ ಸ್ವತಃ ಭೇಟಿ ನೀಡಿದಾಗ ಸಿಬ್ಬಂದಿ ಗೈರು ಹಾಜರಾಗಿದ್ದು, ಹಣಕಾಸು ಬಳಕೆ ಕುರಿತು ಸಮರ್ಪಕ ಮಾಹಿತಿ ನೀಡಿಲ್ಲ. ಶಿರಹಟ್ಟಿಯಲ್ಲಿಯೂ ಸ್ವಚ್ಛತೆ ಬಗ್ಗೆ ನಿರಂತರ ದೂರುಗಳು ಬರುತ್ತಿದ್ದು, ಪ್ರತಿ ವಾರ್ಡ್‌ನಲ್ಲಿ ತಿಂಗಳಿಗೆ ಕನಿಷ್ಠ ಎರಡು-ಮೂರು ಬಾರಿ ಸ್ವಚ್ಛತಾ ಕಾರ್ಯ ನಡೆಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಶಿರಹಟ್ಟಿಯಲ್ಲಿ ನಿರ್ಮಾಣವಾಗುತ್ತಿರುವ 100 ಹಾಸಿಗೆಗಳ ಆಸ್ಪತ್ರೆಗೆ ಜಲಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರಿನ ಪೈಪ್‌ಲೈನ್ ಕಲ್ಪಿಸುವಂತೆ ಸೂಚಿಸಿದರು.

ಬೆಳ್ಳಟ್ಟಿ ಗ್ರಾಮದಲ್ಲಿ ಮೂರು ಕೋಟಿ ರೂಪಾಯಿ ವೆಚ್ಚದ ಬೂದು ನೀರು ನಿರ್ವಹಣಾ ಯೋಜನೆ ಕಾಮಗಾರಿ ತಮ್ಮ ಗಮನಕ್ಕೆ ತಾರದೆ ಆರಂಭಿಸಿರುವುದು ಶಿಷ್ಟಾಚಾರ ಉಲ್ಲಂಘನೆಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ಗ್ರಾಮ ಪಂಚಾಯಿತಿಗಳಲ್ಲಿ ಕಾಮಗಾರಿ ನಿರ್ವಹಣೆಯಲ್ಲಿ ಲೋಪ ಎಸಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ತಾಪಂ ಇಒ ಅವರಿಗೆ ಸೂಚಿಸಿದರು.


ಬೆಳ್ಳಟ್ಟಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಇಸ್ಪೀಟ್ ಮತ್ತು ಓಸಿ ಜೂಜಾಟ ನಡೆಯುತ್ತಿರುವ ಕುರಿತು ಮಾಹಿತಿ ಹಾಗೂ ವಿಡಿಯೊಗಳು ತಮ್ಮ ಬಳಿ ಇರುವುದಾಗಿ ತಿಳಿಸಿದ ಶಾಸಕರು, ಹೊರ ಜಿಲ್ಲೆಗಳಿಂದಲೂ ಜನರು ಬಂದು ಜೂಜಾಟದಲ್ಲಿ ತೊಡಗುತ್ತಿದ್ದಾರೆ.ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಶಿರಹಟ್ಟಿ ಪಿಎಸ್‌ಐ ಈರಪ್ಪ ರಿತ್ತಿ ಅವರಿಗೆ ಸೂಚಿಸಿದರು.

ಗದಗ–ಹೊನ್ನಾಳಿ ರಸ್ತೆಯಲ್ಲಿ ಹೆಚ್ಚುತ್ತಿರುವ ಅಪಘಾತಗಳನ್ನು ತಡೆಯಲು ಶೀಘ್ರದಲ್ಲೇ ನಡೆಯಲಿರುವ ಸಭೆಯಲ್ಲಿ ಪೊಲೀಸ್ ಇಲಾಖೆ ಅಗತ್ಯ ಸುರಕ್ಷತಾ ಕ್ರಮಗಳ ಕುರಿತು ಪ್ರಸ್ತಾವನೆ ಸಲ್ಲಿಸಬೇಕು ಎಂದರು.

ಸಭೆಯಲ್ಲಿ ಶಿರಹಟ್ಟಿ ತಹಸೀಲ್ದಾರ್ ಕೆ. ರಾಘವೇಂದ್ರರಾವ್, ಶಿರಹಟ್ಟಿ ತಾಪಂ ಇಒ ಆರ್.ವಿ. ದೊಡ್ಡಮನಿ, ಲಕ್ಷ್ಮೇಶ್ವರ ತಾಪಂ ಇಒ ಮಂಜುಳಾ ಹಕಾರಿ, ಮುಂಡರಗಿ ತಾಪಂ ಇಒ ಬೆಣ್ಣಿ ಹಾಗೂ ಮೂರು ತಾಲೂಕುಗಳ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಕನಕ-ಷರೀಫ್ ಕಾವ್ಯ ಪುರಸ್ಕಾರಕ್ಕೆ ಸಾಹಿತಿ ಎ.ಎಸ್. ಮಕಾನದಾರ ಆಯ್ಕೆ

ವಿಜಯಸಾಕ್ಷಿ ಸುದ್ದಿ, ಗದಗ



ಹಿರಿಯ ಸಾಹಿತಿ, ಮಕಾನದಾರ ಸಾಹಿತ್ಯ ಪ್ರತಿಷ್ಠಾನ ಹಾಗೂ ನಿರಂತರ ಪ್ರಕಾಶನದ ಸಂಚಾಲಕರಾದ ಎ.ಎಸ್. ಮಕಾನದಾರ ಅವರು 2024ನೇ ಸಾಲಿನ ರಾಜ್ಯ ಮಟ್ಟದ ಕನಕ–ಷರೀಫ್ ಕಾವ್ಯ ಪುರಸ್ಕಾರಕ್ಕೆ ಆಯ್ಕೆಯಾಗಿದ್ದಾರೆ.

ಈ ಕುರಿತು ಆಯ್ಕೆ ಸಮಿತಿಯ ಅಧ್ಯಕ್ಷರಾದ ಹಿರಿಯ ಬಂಡಾಯ ಸಾಹಿತಿ ಡಾ.ಸತೀಶ್ ಕುಲಕರ್ಣಿ ಹಾಗೂ ಕಾರ್ಯಕ್ರಮದ ಸಂಚಾಲಕರಾದ ಪ್ರೊ.ರಂಜಾನ್ ಹೆಬಸೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಿರಿಯ ರಂಗಕರ್ಮಿ, ಉತ್ಸವ ರಾಕ್ ಗಾರ್ಡನ್ ಸಂಸ್ಥಾಪಕರಾದ ಕಲಾ ಗುರು ಡಾ.ಟಿ.ಬಿ. ಸೊಲಬಕ್ಕನವರ ಅವರ 79ನೇ ಜನ್ಮದಿನದ ಅಂಗವಾಗಿ, ಹಾವೇರಿ ಜಿಲ್ಲೆಯ ಶಿಗ್ಗಾವಿ ತಾಲೂಕಿನ ಉತ್ಸವ ರಾಕ್ ಗಾರ್ಡನ್‌ನಲ್ಲಿ ಧಾರವಾಡ ಜಿಲ್ಲೆಯ ಹೆಬಸೂರಿನ ಉತ್ತರ ಸಾಹಿತ್ಯ ವೇದಿಕೆ ಆಶ್ರಯದಲ್ಲಿ ನಡೆಯಲಿರುವ ರಾಜ್ಯಮಟ್ಟದ ಕವಿಗೋಷ್ಠಿ, ಗಜಲ್ ಗೋಷ್ಠಿ ಹಾಗೂ ಪುಸ್ತಕ ಬಿಡುಗಡೆ ಸಮಾರಂಭದಲ್ಲಿ ಪುರಸ್ಕಾರ ಪ್ರದಾನ ಮಾಡಲಾಗುತ್ತದೆ.

2022ನೇ ಸಾಲಿನ ಕನಕ–ಷರೀಫ್ ಕಾವ್ಯ ಪುರಸ್ಕಾರಕ್ಕೆ ಹಿರಿಯ ಕವಿ ಡಾ.ಚನ್ನಪ್ಪ ಅಂಗಡಿ, 2023ನೇ ಸಾಲಿಗೆ ಹಿರಿಯ ವಿಮರ್ಶಕ ಡಾ.ಜಾಜಿ ದೇವೇಂದ್ರಪ್ಪ, 2024ನೇ ಸಾಲಿಗೆ ಹಿರಿಯ ಸಾಹಿತಿ ಎ.ಎಸ್. ಮಕಾನದಾರ, 2025ನೇ ಸಾಲಿಗೆ ಹಿರಿಯ ಅನುವಾದಕಿ ಹಾಗೂ ಪತ್ರಕರ್ತೆ ಮಂಜುಳಾ ಕಿರುಗಾವಲು ಆಯ್ಕೆಯಾಗಿದ್ದಾರೆ.

ಆಯ್ಕೆ ಸಮಿತಿಯಲ್ಲಿ ಅಬ್ದುಲ್ ಹೈ ತೋರಣಗಲ್ಲು, ಶ್ರೀಶೈಲ ಮಾದಣ್ಣವರ, ಪ್ರೊ.ರಂಜಾನ್ ಹೆಬಸೂರ, ದೀಪಾ ಗೋನಾಳ ಹಾಗೂ ಡಾ. ವೇದಾರಾಣಿ ದಾಸನೂರ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದರು.

ಈ ಹಿಂದೆ ಹಾವೇರಿ ಜಿಲ್ಲೆಯ ವಿಜಯಕಾಂತ್ ಪಾಟೀಲ, ಕೊಪ್ಪಳ ಜಿಲ್ಲೆಯ ಗಜಲ್ ಕವಿ ಅಲ್ಲಾ ಗಿರಿರಾಜ್, ದಾವಣಗೆರೆಯ ಬಿ.ಶ್ರೀನಿವಾಸ್ ಹಾಗೂ ಆಕಾಶವಾಣಿ ಧಾರವಾಡದ ಮಾಜಿ ನಿರ್ದೇಶಕ, ಕಥೆಗಾರ ಡಾ.ಬಸು ಬೇವಿನಗಿಡದ ಅವರು ಈ ಪ್ರತಿಷ್ಠಿತ ಪುರಸ್ಕಾರಕ್ಕೆ ಭಾಜನರಾಗಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka